ಸಂಪುಟ : 10 ಸಂಚಿಕೆ: 200 ಪುಟ : 4+2 ಬೆಲೆ: 3.00 ಬುಧವಾರ ಸೆಪ್ಟೆಂಬರ್ 17 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 200 Pages : 4+2 Price : 3.00 Wednesday September 17 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ನ್ಯಾಯಯುತ-ನಿಷ್ಪಕ್ಷಪಾತ ತನಿಖೆಗೆ ಆಗ್ರಹ

## ಧರ್ಮಸ್ಥಳದಲ್ಲಿ ಕೊಂದವರು ಯಾರು..?



■ವಿಜಯಸಾಕ್ಷಿ ಸುದ್ದಿ, ಮಂಗಳೂರು

ಧರ್ಮಸ್ಥಳದ ಸುತ್ತಲ ಗ್ರಾಮಗಳಲ್ಲಿ ವರದಿಯಾಗಿರುವ ನೂರಾರು ಮಹಿಳೆಯರ ಅತ್ಯಾಚಾರ, ಕೊಲೆ, ಅನುಮಾನಾಸ್ಪದ ಸಾವುಗಳ ಪ್ರಕರಣಗಳನ್ನು ತನಿಖೆ ಮಾಡಲು ರಚಿಸಿರುವ ವಿಶೇಷ ತನಿಖಾ ತಂಡವು (ಎಸ್‌ಐಟಿ) ಯಾವ ಒತ್ತಡಗಳಿಲ್ಲದೆ, ನ್ಯಾಯಯುತವಾಗಿ ಮತ್ತು ನಿಷ್ಪಕ್ಷಪಾತವಾಗಿ ಕೆಲಸ ಮಾಡಲು ಅಗತ್ಯ ಅಧಿಕಾರವನ್ನು ಹಾಗೂ ಅವಕಾಶವನ್ನು ಒದಗಿಸಬೇಕು ಎಂದು 'ಕೊಂದವರು ಯಾರು' ಆಂದೋಲನವು ರಾಜ್ಯ ಸರ್ಕಾರವನ್ನು ಆಗ್ರಹಿಸಿದೆ.

ಬೆಂಗಳೂರಿನ ಗಾಂಧಿ ಭವನದಲ್ಲಿ ಇಂದು ಆರಂಭವಾದ "ಕೊಂದವರು ಯಾರು" ಆಂದೋಲನವು, 'ನೊಂದವರೊಂದಿಗೆ ನಾವಿದ್ದೇವೆ' ಎಂದು ಘೋಷಿಸಿತು. ಜೊತೆಗೆ, ಎಲ್ಲ ಪ್ರಕರಣಗಳ ಆರೋಪಿಗಳನ್ನು ಪತ್ತೆ ಮಾಡಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು, ತನಿಖೆಯನ್ನು ಸರಿಯಾಗಿ ನಡೆಸದೆ ಕರ್ತವ್ಯಲೋಪ ಎಸಗಿರುವ ಅಧಿಕಾರಿಗಳು, ವೈದ್ಯರು, ತನಿಖಾಧಿಕಾರಿಗಳು ಮತ್ತು ಜನಪ್ರತಿನಿಧಿಗಳನ್ನೂ ಅಪರಾಧಿಗಳೆಂದು ಪರಿಗಣಿಸಿ ಕಾನೂನು ಪ್ರಕಾರ ಶಿಕ್ಷೆಗೆ ಗುರಿಪಡಿಸಬೇಕು ಎಂದು ಆಗ್ರಹಿಸಿತು.

ನೊಂದ ಕುಟುಂಬಗಳನ್ನು ಭೇಟಿ ಮಾಡಿದ ಅನುಭವಗಳನ್ನು ಹಂಚಿಕೊಂಡ ಮಾನಸ ಬಳಗದ ಚಂಪಾವತಿ,

▸▸3ನೇ ಪುಟಕ್ಕೆ

### ಹಳ್ಳದಲ್ಲಿ ಕೊಚ್ಚಿಹೋದ ಆರೋಗ್ಯ ಇಲಾಖೆಯ ಸಿಬ್ಬಂದಿಗಳು । ಇಬ್ಬರು ಬಚಾವ್

# ಪತ್ತೆಯಾಗದ ಮಹಿಳಾ ಸಿಬ್ಬಂದಿ!

■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಯಾಸ ಹಡಗಲಿ ಗ್ರಾಮದಲ್ಲಿ ಆರೋಗ್ಯ ತಪಾಸಣಾ ಕಾರ್ಯವನ್ನು ಮುಗಿಸಿಕೊಂಡು ಬೆಳವಣಕಿ ಆರೋಗ್ಯ ಕೇಂದ್ರಕ್ಕೆ ವಾಪಸ್ಸಾಗುತ್ತಿದ್ದಾಗ ಬೆಣ್ಣೆಹಳ್ಳದ ಪಕ್ಕ ಯಾಸ ಹಡಗಲಿ ಹಾಗೂ ಕೌಜಗೇರಿ ಗ್ರಾಮದ ನಡುವಿನ ಈರುವೆ ಹಳ್ಳಕ್ಕೆ ಆರೋಗ್ಯ ಇಲಾಖೆಯ ಮೂವರು ಸಿಬ್ಬಂದಿಗಳು ಹಳ್ಳದಲ್ಲಿ ಸಿಲುಕಿದ ಘಟನೆ ಮಂಗಳವಾರ ಸಂಜೆ ನಡೆದಿದೆ.

ರೋಣ ತಾಲೂಕಿನಲ್ಲಿ ಮಂಗಳವಾರ ಮಧ್ಯಾಹ್ನ ಭಾರೀ ಮಳೆ ಸುರಿದ ಹಿನ್ನೆಲೆಯಲ್ಲಿ ಈರುವೆ ಹಳ್ಳ ತುಂಬಿ ಹರಿದಿದೆ. ಯಾಸ ಹಡಗಲಿ ಗ್ರಾಮದಲ್ಲಿ ನಡೆದ ಆರೋಗ್ಯ ಶಿಬಿರವನ್ನು ಮುಗಿಸಿಕೊಂಡು ಎಂದಿನಂತೆ ಬೆಳವಣಕಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಸಮುದಾಯ ಆರೋಗ್ಯ ಅಧಿಕಾರಿ ಬಸವರಾಜ ಕಡಪಟ್ಟಿ (34), ಹಿರಿಯ ಆರೋಗ್ಯ ಅಧಿಕಾರಿ ವೀರಸಂಗಯ್ಯ ಹಿರೇಮಠ (49), ಕಿರಿಯ ಆರೋಗ್ಯ ಸಹಾಯಕಿ ಬಸಮ್ಮ ಗುರಿಕಾರ (32) ದ್ವಿಚಕ್ರ ವಾಹನದಲ್ಲಿ ವಾಪಸ್ ಬರುತ್ತಿದ್ದರು. ಈ ಸಂದರ್ಭದಲ್ಲಿ ಈರುವೆ ಹಳ್ಳ ತುಂಬಿ ಹರಿಯುತ್ತಿತ್ತು.

ನೀರಿನ ರಭಸಕ್ಕೆ ನಿಯಂತ್ರಣ ತಪ್ಪಿದ ವಾಹನ ಹಳ್ಳಕ್ಕೆ ಬಿದ್ದಿದ್ದು, ಇಬ್ಬರು ಪುರುಷ ಸಿಬ್ಬಂದಿಗಳು ಈಜಿ ದಡ ಸೇರಿದ್ದಾರೆ. ಅವರಿಗೆ ರೋಣ ತಾಲೂಕಾಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದ್ದು, ಮಹಿಳಾ ಸಿಬ್ಬಂದಿ ಬಸಮ್ಮ ಗುರಿಕಾರ ನಾಪತ್ತೆಯಾಗಿದ್ದಾರೆ.



ತಾಲೂಕಿನಲ್ಲಿ ಮಂಗಳವಾರ ಮಧ್ಯಾಹ್ನದಿಂದಲೇ ಮಳೆಯ ಅಬ್ಬರ ಜೋರಾಗಿದೆ. ಅಲ್ಲದೆ ರೋಣ-ಬದಾಮಿ ರಸ್ತೆ ಪ್ರದೇಶದಲ್ಲಿಯೂ ವಿಪರೀತ ಮಳೆ ಸುರಿದಿದ್ದು, ಜಮೀನುಗಳಲ್ಲಿ ಹೊಳೆಯಂತೆ ನೀರು ಹರಿದಿದೆ. ತಾಲೂಕಿನಾದ್ಯಂತ ವ್ಯಾಪಕವಾಗಿ ಸುರಿದ ಮಳೆಯಿಂದ ಜಮೀನುಗಳಲ್ಲಿನ ಒಡ್ಡು-ಒಳಗಟ್ಟೆಗಳು ಸಹ ಕಿತ್ತುಹೋಗಿವೆ. ಮೆಕ್ಕೆಜೋಳ, ಈರುಳ್ಳಿ ಬೆಳೆಗಳು ಮಳೆ ನೀರಲ್ಲಿ ಮುಳುಗಿ ನಷ್ಟ ಸಂಭವಿಸಿದೆ.



> ಮಳೆ ಅಬ್ಬರ ಜೋರಾಗಿದೆ. ಹಳ್ಳವೂ ಭರ್ತಿಯಾಗಿದ್ದು, ತುಂಬಿ ಹರಿಯುತ್ತಿದೆ. ಮಳೆಯ ನಡುವೆಯೇ ಕಾರ್ಯಚಾರಣೆ ನಡೆಸಿದರೂ ಫಲ ಸಿಗಲಿಲ್ಲ. ಮತ್ತೆ ಬುಧವಾರ ಬೆಳಗಿನ ಜಾವ ಮಹಿಳಾ ಸಿಬ್ಬಂದಿ ಬಸಮ್ಮ ಗುರಿಕಾರರ ಪತ್ತೆ ಕಾರ್ಯಾಚರಣೆಯನ್ನು ನಡೆಸಲಿದ್ದೇವೆ.
>
> – ನಾಗರಾಜ ಕೆ.
> ತಹಸೀಲ್ದಾರರು, ರೋಣ.



ಜಿಟಿಜಿಟಿ ಮಳೆಯ ನಡುವೆಯೇ ಅಗ್ನಿಶಾಮಕ, ಎನ್‌ಡಿಆರ್‌ಎಫ್, ಪೊಲೀಸ್, ಕಂದಾಯ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಪತ್ತೆ ಕಾರ್ಯ ನಡೆಸಿದರೂ ಬಸಮ್ಮ ಗುರಿಕಾರರ ಸುಳಿವು ಪತ್ತೆಯಾಗಲಿಲ್ಲ. ಹಳ್ಳದ ಸುತ್ತಲೂ ಕತ್ತಲು ಆವರಿಸಿದ್ದರಿಂದ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಲಾಗಿದೆ. ಬಸಮ್ಮ ಗುರಿಕಾರರ ಹುಡುಕಾಟಕ್ಕೆ ಗ್ರಾಮಸ್ಥರು ಕೈಜೋಡಿಸಿದರು. ಸ್ಥಳಕ್ಕೆ ಜಿಲ್ಲಾ ಆರೋಗ್ಯಾಧಿಕಾರಿ ಸಿ.ಎಸ್. ನಿಲಗುಂದ, ತಹಸೀಲ್ದಾರ ನಾಗರಾಜ ಕೆ ಭೇಟಿ ನೀಡಿ, ಪರಿಶೀಲಿಸಿದರು.

### ಜಾತಿಗಣತಿ ವಿರೋಧಿಸಿ ಸಾಮರಸ್ಯ ವೇದಿಕೆಯಿಂದ ನಾಳೆ ಬೃಹತ್ ಪ್ರತಿಭಟನೆ

# ಸರ್ಕಾರದಿಂದ ಸಮಾಜವನ್ನು ಒಡೆಯುವ ಹುನ್ನಾರ




■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರ ನಡೆಸಲಿರುವ ಹೊಸ ಜಾತಿಗಣತಿ ಮತ್ತು ಅದರಲ್ಲಿನ ಅಂಶಗಳು ಸಮಾಜವನ್ನು ಒಡೆಯುವ ಹುನ್ನಾರದಿಂದ ಕೂಡಿದೆ ಎಂದು ಆರೋಪಿಸಿ, ಸೆಪ್ಟೆಂಬರ್ 18ರಂದು ಸಾಮರಸ್ಯ ವೇದಿಕೆ ವತಿಯಿಂದ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ವೇದಿಕೆಯ ಪ್ರಮುಖ ರವಿಕಾಂತ ಅಂಗಡಿ ತಿಳಿಸಿದರು.

ಮಂಗಳವಾರ ಇಲ್ಲಿನ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಿಗ್ಗೆ 10 ಗಂಟೆಗೆ ನಗರದ ಕಿತ್ತೂರು ಚನ್ನಮ್ಮ ವೃತ್ತದಿಂದ ಪ್ರತಿಭಟನೆ ಆರಂಭವಾಗಿ, ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಹಾಗೂ ಹಿಂದುಳಿದ ವರ್ಗಗಳ ಆಯೋಗಕ್ಕೆ ಮನವಿ ಸಲ್ಲಿಸಲಾಗುವುದು. ಈ ಸಮೀಕ್ಷೆಯಲ್ಲಿ ಹಲವಾರು ಹಿಂದೂ ಜಾತಿಗಳನ್ನು ಕ್ರಿಶ್ಚಿಯನ್ ಎಂದು ನಮೂದಿಸಿರುವುದು ಅಕ್ಷಮ್ಯ ಅಪರಾಧ. ಈ ಮೂಲಕ ಹಿಂದೂ ಸಮಾಜವನ್ನು ದುರ್ಬಲಗೊಳಿಸುವ ವ್ಯವಸ್ಥಿತ ಪಿತೂರಿ ನಡೆಯುತ್ತಿದೆ ಎಂದು ಅವರು ಆರೋಪಿಸಿದರು.

ವೇದಿಕೆಯ ಸದಸ್ಯ ವೆಂಕಟೇಶ ಕುಲಕರ್ಣಿ ಮಾತನಾಡಿ, ಕ್ರೈಸ್ತ ಜಾತಿಗಳನ್ನು ಕ್ರಿಶ್ಚಿಯನ್ ಎಂದು ಮಾತ್ರ ನಮೂದಿಸಲು ಅವಕಾಶ ನೀಡಿದ್ದು, ಲಿಂಗಾಯತ, ಒಕ್ಕಲಿಗ, ಕುರುಬ, ನೇಕಾರ, ಮಡಿವಾಳ, ಬಿಲ್ಲವ, ಕುಂಬಾರ, ಮಾದಿಗ, ಹೊಲೆಯ, ವಡ್ಡ ಸೇರಿದಂತೆ 50ಕ್ಕೂ ಹೆಚ್ಚು ಪ್ರಮುಖ ಹಿಂದೂ ಜಾತಿಗಳ ಮುಂದೆ ಕ್ರೈಸ್ತ ಎಂದು ಸೇರಿಸಲಾಗಿದೆ. ಇದು ಏಕಾಏಕಿ ಹೊಸ ಜಾತಿಗಳನ್ನು ಸೃಷ್ಟಿಸುವ ಹುನ್ನಾರ. ಹಿಂದೂ ಸಮಾಜದಲ್ಲಿ ಮತಾಂತರಕ್ಕೆ ಕುಮ್ಮಕ್ಕು ನೀಡುವ ಷಡ್ಯಂತ್ರ ಇದಾಗಿದೆ ಎಂದು ಆರೋಪಿಸಿದರು.

ನರಸಾಪುರ ಅನ್ನದಾನೇಶ್ವರ ಮಠದ ಅನ್ನದಾನೇಶ ಶ್ರೀಗಳು ಹಾಗೂ ಗಜೇಂದ್ರಗಡ ತಾಲೂಕಿನ ಕಾಲಜ್ಞಾನ ಮಠದ ಶ್ರೀಗಳು ಮಾತನಾಡಿ, ಸರ್ಕಾರದ ಈ ನಡೆಯನ್ನು ಎಲ್ಲಾ ಸಮಾಜಗಳ ಮಠಾಧೀಶರು ಮತ್ತು ಜಾತಿವಾರು ಸಂಘಟನೆಗಳು ಅರ್ಥ ಮಾಡಿಕೊಳ್ಳಬೇಕು. ದಸರಾ-ನವರಾತ್ರಿ ಸಂದರ್ಭದಲ್ಲಿಯೇ ಸಮೀಕ್ಷೆ ನಡೆಸುವುದು ಸರ್ಕಾರದ ದುರುದ್ದೇಶವನ್ನು ತೋರಿಸುತ್ತದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಹಿರೇವಡ್ಡಟ್ಟಿ ಶ್ರೀ ಶರಣ ಬಸವ ಶ್ರೀಗಳು, ತಳ್ಳಿಹಾಳ ಸಂಸ್ಥಾನ ಮಠದ ಡಾ. ಚನ್ನವೀರೇಶ್ವರ ಶ್ರೀಗಳು, ವಾಲ್ಮೀಕಿ ಸಮುದಾಯದ ಜಗದೀಶ್ ಎಸ್.ಪಿ, ಭೀಮನಗೌಡ ಪಾಟೀಲ, ರಾಮಚಂದ್ರ ಮೋನೆ, ಕುಮಾರ ಬೆಂತೂರಮಠ, ವಂದನಾ ವರ್ಣೇಕರ, ಉಡಚಪ್ಪ ಹಳ್ಳಿಕೇರಿ ಸೇರಿದಂತೆ ವಿವಿಧ ಸಮುದಾಯಗಳ ಮುಖಂಡರು ಉಪಸ್ಥಿತರಿದ್ದರು.

### ಲಿಂ. ಶ್ರೀ ಸೋಮಶೇಖರ ಶಿವಾಚಾರ್ಯ ಸ್ವಾಮಿಗಳವರ 5ನೇ ವರ್ಷದ ಪುಣ್ಯ ಸ್ಮರಣೋತ್ಸವ

## ಸಂಸ್ಕಾರ, ಸಚ್ಚಾರಿತ್ರ್ಯದಿಂದ ಬದುಕು ಶ್ರೀಮಂತವಾಗಲಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬಾಳಿನ ಭಾಗ್ಯೋದಯ-ಕ್ಕೆ ಆದರ್ಶ ಮೌಲ್ಯಗಳ ಪರಿಪಾಲನೆ ಬೇಕು. ಮನುಷ್ಯನ ಮನಸ್ಸು ಮಲಿನಗೊಂಡ ಬಟ್ಟೆಯಂತಾಗಿದೆ. ಸುಂದರವಾದ ಉಡುಗೆ-ತೊಡುಗೆಗಳಿಂದ ವ್ಯಕ್ತಿತ್ವ ಬದಲಿಸಿಕೊಳ್ಳಬಹುದೇ ಹೊರತು ಬದುಕು ಬದಲಿಸಲು ಸಾಧ್ಯವಿಲ್ಲ. ಸಂಸ್ಕಾರ ಮತ್ತು ಸಚ್ಚಾರಿತ್ರ್ಯದಿಂದ ಬದುಕು ಶ್ರೀಮಂತಗೊಳ್ಳಲು ಸಾಧ್ಯವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸೋಮವಾರ ಸಮೀಪದ ಅಬ್ಬಿಗೇರಿ ಹಿರೇಮಠದ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂಗಲ ಭವನದಲ್ಲಿ ಜರುಗಿದ ಲಿಂ. ಶ್ರೀ ಸೋಮಶೇಖರ ಶಿವಾಚಾರ್ಯ ಸ್ವಾಮಿಗಳವರ 5ನೇ ವರ್ಷದ ಪುಣ್ಯ ಸ್ಮರಣೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

▸▸3ನೇ ಪುಟಕ್ಕೆ

ರೋಣ ಶಾಸಕ ಜಿ.ಎಸ್. ಪಾಟೀಲ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿ, ಆಧುನಿಕ ಯುಗದಲ್ಲಿ ಬೇಕಾದಷ್ಟು ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ. ಜಾಗತೀಕರಣ, ಉದಾರೀಕರಣ, ಖಾಸಗೀಕರಣ ಬೆಳೆದರಷ್ಟೇ ಸಾಲದು, ಅದರೊಂದಿಗೆ ಮನುಷ್ಯನಲ್ಲಿ ಮಾನವೀಯತೆಯ ಅಂತಃಕರಣ ಬೆಳೆದು ಬರಬೇಕಾಗಿದೆ. ಲಿಂ. ಶ್ರೀ ಸೋಮಶೇಖರ ಶಿವಾಚಾರ್ಯರು ಆಡಿದಂತೆ ಕೆಲಸ ಮಾಡಿ ತೋರಿದವರು. ಸರಳ ಸಜ್ಜನಿಕೆಯ ವ್ಯಕ್ತಿತ್ವ ಹೊಂದಿದ ಶ್ರೀಗಳ ಜೀವನದರ್ಶನ ನಮ್ಮೆಲ್ಲರಿಗೂ ದಾರಿದೀಪವಾಗಿದೆ ಎಂದರು.

## ಹಿಂದೂ ಮಹಾಗಣಪತಿ ವಿಸರ್ಜನೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ


ಪಟ್ಟಣದ ಹಾವಳಿ ಹನುಮಂತದೇವರ ದೇವಸ್ಥಾನದ ಹತ್ತಿರ ಸ್ಥಾಪಿಸಲಾಗಿದ್ದ ಹಿಂದೂ ಮಹಾಗಣಪತಿ ಮೂರ್ತಿಯ ವಿಸರ್ಜನಾ ಕಾರ್ಯಕ್ರಮ ಮಂಗಳವಾರ ಅದ್ದೂರಿಯಾಗಿ ನೆರವೇರಿತು. ದೇವಸ್ಥಾನದಿಂದ ಪ್ರಾರಂಭವಾಗಿ ವಿದ್ಯಾರಣ್ಯ ವೃತ್ತದಿಂದ ಪಂಪವೃತ್ತ, ಕೋರ್ಟ್ ಸರ್ಕಲ್, ಭರಮದೇವರ ವೃತ್ತ, ಪಾದಗಟ್ಟಿ ಮೂಲಕ ಸಾವಿರಾರು ಜನರ ಜಯಘೋಷಗಳೊಂದಿಗೆ ವಿಸರ್ಜನೆ ಮಾಡಲಾಯಿತು. ಗಣೇಶ ಮಂಡಳಿಯವರು ಮೆರವಣಿಗೆಯ ಹಿನ್ನೆಲೆಯಲ್ಲಿ ಒಂದೇ ಧಿರಿಸು ಹಾಗೂ ಕೇಸರಿ ಪೇಟ ಧರಿಸಿ ಮೆರವಣಿಗೆಯಲ್ಲಿ ಪಾಲ್ಗೊಂಡು ಗಮನ ಸೆಳೆದರು.

ಹಿಂದೂ ಫೈರ್ ಬ್ರ್ಯಾಂಡ್ ಎಂದೇ ಹೆಸರಾದ ಶಾಸಕ ಬಸನಗೌಡ ಪಾಟೀಲ ಯತ್ನಾಳ ಆಗಮಿಸುತ್ತಾರೆ ಎಂಬ ಪ್ರಚಾರದ ಹಿನ್ನೆಲೆಯಲ್ಲಿ ನಿರೀಕ್ಷೆಗೂ ಮೀರಿ ಜನರು ಸೇರಿದ್ದರು. ಮುಂಜಾಗ್ರತಾ ಕ್ರಮವವಾಗಿ ಹೆಚ್ಚಿನ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿತ್ತು.

## ಸಂಸದ ಬಸವರಾಜ ಬೊಮ್ಮಾಯಿ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ

ಹಾವೇರಿ-ಗದಗ ಕ್ಷೇತ್ರದ ಸಂಸದ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸೆ. 17ರಂದು ಮಧ್ಯಾಹ್ನ 3 ಗಂಟೆಗೆ ಗದಗ ನಗರದ ಎಪಿಎಂಸಿ ಯಾರ್ಡ್‌ನಲ್ಲಿರುವ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರ 75ನೇ ಜನ್ಮದಿನದ ಅಂಗವಾಗಿ ಭಾರತ ಸರಕಾರದ ಸಾಮಾಜಿಕ ನ್ಯಾಯ ಹಾಗೂ ಸಬಲೀಕರಣ ಮಂತ್ರಾಲಯ ಏರ್ಪಡಿಸಿರುವ 'ರಾಷ್ಟ್ರೀಯ ವಯೋಶ್ರೀ' ಯೋಜನೆಯಲ್ಲಿ



ಹಿರಿಯ ನಾಗರಿಕರಿಗೆ ಸಾಧನ-ಸಲಕರಣೆಗಳ ವಿತರಣೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕ್ರೀಡಾಕೂಟದಲ್ಲಿ ಭಾಗಿಯಾಗಿ ಖಾಸಗಿ ವಾಹನಗಳ ಟಾಪ್ ಮೇಲೆ ವಿದ್ಯಾರ್ಥಿಗಳ ಪ್ರಯಾಣ!

# ವಿದ್ಯಾರ್ಥಿಗಳ ಸುರಕ್ಷತೆಗೆ ಹೊಣೆ ಯಾರು?



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇಲ್ಲಿನ ಶ್ರೀ ಎಸ್.ಎಂ. ಡಬಾಲಿ ತಾಲೂಕಾ ಕ್ರೀಡಾಂಗಣದಲ್ಲಿ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಸೆ.16ರಂದು ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ತಾಲೂಕಾ ಮಟ್ಟದ ಕ್ರೀಡಾಕೂಟ ನಡೆಯಿತು. ಇದರಲ್ಲಿ ಭಾಗಿಯಾದ ನೂರಾರು ವಿದ್ಯಾರ್ಥಿಗಳಿಗೆ ಸಮರ್ಪಕ ವಾಹನ ವ್ಯವಸ್ಥೆ ಇಲ್ಲದೇ ಎಲ್ಲೆಂದರಲ್ಲಿ ಖಾಸಗಿ ವಾಹನಗಳ ಟಾಪ್ ಮೇಲೆ ಪ್ರಯಾಣ ಮಾಡುತ್ತಿರುವುದು ಕಂಡು ಬಂದಿತು.

ಕ್ರೀಡಾಕೂಟಗಳಲ್ಲಿ ಶಾಲಾ ವಿದ್ಯಾರ್ಥಿಗಳನ್ನು ವ್ಯವಸ್ಥಿತವಾಗಿ ಕರೆದುಕೊಂಡು ಹೋಗಲು ಸರಕಾರ ಸ್ಪಷ್ಟ ನಿರ್ದೇಶನ ನೀಡುತ್ತಿದ್ದರೂ ಸಹ ಅದನ್ನು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಗಂಭೀರವಾಗಿ ಪರಿಗಣಸದೇ ಇದ್ದುದರಿಂದ ಕ್ರೀಡಾಕೂಟಗಳು ಮುಗಿದ ಮೇಲೆ, ಸೂಕ್ತ ಸಾರಿಗೆ ವ್ಯವಸ್ಥೆ ಇಲ್ಲದೆ, ಖಾಸಗಿ ವಾಹನಗಳಲ್ಲಿ ಜಾಗ ಸಾಲದೇ ಶಾಲಾ ವಿದ್ಯಾರ್ಥಿಗಳು ಟಾಪ್ ಮೇಲೆಯೇ ಪ್ರಯಾಣಿಸುತ್ತಿದ್ದರೂ ಯಾರೂ ಸಹ ಅದನ್ನು ತಡೆಯುವ ಗೋಜಿಗೆ ಹೋಗದೇ ಇರುವುದು ವಿದ್ಯಾರ್ಥಿಗಳ ಸುರಕ್ಷತೆ ಯಾರ ಹೊಣೆ ಎಂಬ ಪ್ರಶ್ನೆ ಮೂಡಿಸಿತ್ತು.

ಸರಕಾರಿ ಶಾಲೆಗಳ ಸಬಲೀಕರಣಕ್ಕಾಗಿ ಹಲವು ಯೋಜನಗಳ ಮೂಲಕ ಗುಣಮಟ್ಟದ ಶಿಕ್ಷಣದ ಜೊತೆಗೆ ವಿದ್ಯಾರ್ಥಿಗಳು ದೈಹಿಕವಾಗಿಯೂ ಸಹ ಸದೃಢತೆಯಿಂದ ಇರಬೇಕು, ಅವರಲ್ಲಿರುವ ಪ್ರತಿಭೆಯನ್ನು ಹೊರಹಾಕಬೇಕೆಂಬ ಉದ್ದೇಶಕ್ಕೆ ಇಂತಹ ಕ್ರೀಡಾಕೂಟಗಳನ್ನು ಆಯೋಜಿಸಿ ವಿದ್ಯಾರ್ಥಿಗಳಿಗೆ ಉತ್ತಮ ವೇದಿಕೆಯನ್ನು ಕಲ್ಪಿಸುತ್ತಿರುವುದು ಸ್ವಾಗತಾರ್ಹ. ಆದರೆ ಇಂತಹ ಸಂದರ್ಭದಲ್ಲಿ ಮಕ್ಕಳ ಸುರಕ್ಷತೆಯ ಕಡೆಗೆ ಹೆಚ್ಚಿನ ಗಮನ ಹರಿಸಬೇಕಿದ್ದ ಶಾಲಾ ಶಿಕ್ಷಣ ಇಲಾಖೆಯ ಎಲ್ಲ ಹಂತದ ಅಧಿಕಾರಿಗಳು ಟಾಪ್ ಮೇಲೆ ಕುಳಿತುಕೊಂಡು ಪ್ರಯಾಣಕ್ಕೆ ಅವಕಾಶ ಮಾಡಿಕೊಟ್ಟಿರುವುದು ವಿದ್ಯಾರ್ಥಿಗಳ ಜೀವದ ಜೊತೆ ಚೆಲ್ಲಾಟವಾಡಿದಂತಲ್ಲವೇ, ಅವಘಡಗಳಾದರೆ ಯಾರು ಹೊಣೆ ಎಂಬ ಪ್ರಶ್ನೆಗಳು ರಸ್ತೆಯ ಬದಿಯಲ್ಲಿ ಸಂಚರಿಸುತ್ತಿದ್ದ ಅನೇಕರನ್ನು ಕಾಡಿದವು.

ಶಿರಹಟ್ಟಿ ತಾಲೂಕಿನ ಬಹುತೇಕ ಗ್ರಾಮೀಣ ಭಾಗಗಳ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳು ತರಗತಿಗಳು ಮುಗಿದ ನಂತರ ಬಸ್‌ಗಳಲ್ಲಿ ಪ್ರಯಾಣಿಸಲು ಹೆಣಗಾಡುತ್ತಿದ್ದಾರೆ. ಆದರೆ, ಇದನ್ನು ಸರಿಪಡಿಸುವ ಗೋ-ಜಿಗೆ ಯಾವೊಬ್ಬ ಅಧಿಕಾರಿಯೂ ಮುಂದಾಗುತ್ತಿಲ್ಲ.



## ಧರ್ಮಸ್ಥಳ ಪ್ರಕರಣ: ಮಾಸ್ಕ್ ಮ್ಯಾನ್ ಚಿನ್ನಯ್ಯನ ಜಾಮೀನು ಅರ್ಜಿ ವಜಾ!



■ವಿಜಯಸಾಕ್ಷಿ ಸುದ್ದಿ, ಮಂಗಳೂರು

ಧರ್ಮಸ್ಥಳದ ಪ್ರಕರಣದಲ್ಲಿ ಜೈಲು ಪಾಲಾಗಿರುವ ಚಿನ್ನಯ್ಯನ ಜಾಮೀನು ಅರ್ಜಿಯನ್ನು ಬೆಳ್ತಂಗಡಿ ಕೋರ್ಟ್ ವಜಾ ಮಾಡಿದೆ.

ಕಳೆದ ಎರಡು ದಶಕಗಳಲ್ಲಿ ಧರ್ಮಸ್ಥಳದಲ್ಲಿ ಹಲವಾರು ಕೊಲೆ ಮತ್ತು ಅತ್ಯಾಚಾರಗಳು ನಡೆದಿದ್ದು, ನಾನೇ ಆ ಶವಗಳನ್ನು ಹೂತು ಹಾಕಿರುವುದಾಗಿ ಹೇಳಿ, ಈಗ ಜೈಲು ಪಾಲಾಗಿರುವ ಸಿ ಎನ್ ಚಿನ್ನಯ್ಯನ ಜಾಮೀನು ಅರ್ಜಿಯನ್ನು ಬೆಳ್ತಂಗಡಿ ನ್ಯಾಯಾಲಯ ಮಂಗಳವಾರ ವಜಾಗೊಳಿಸಿದೆ.

ಶಿವಮೊಗ್ಗ ಜೈಲಿನಲ್ಲಿ ನ್ಯಾಯಾಂಗ ಬಂಧನದಲ್ಲಿರುವ ಚಿನ್ನಯ್ಯನನ್ನು ಮಂಗಳವಾರ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಯಿತು. "ಅನಾರೋಗ್ಯ" ಮತ್ತು "ಕೌಟುಂಬಿಕ ಜವಾಬ್ದಾರಿಗಳ" ಆಧಾರದ ಮೇಲೆ ಜಾಮೀನು ಕೋರಿ ಚಿನ್ನಯ್ಯ ಅರ್ಜಿ ಸಲ್ಲಿಸಿದ್ದರು. ಆದರೆ ಜಾಮೀನು ನೀಡದಂತೆ ಎಸ್ಐಟಿ ಪರ ವಕೀಲರು ಆಕ್ಷೇಪಣೆ ಸಲ್ಲಿಕೆ ಮಾಡಿದ್ದರು. ಎರಡು ಕಡೆಯ ವಾದ-ಪ್ರತಿವಾದ ಆಲಿಸಿದ ಬೆಳ್ತಂಗಡಿ ನ್ಯಾಯಾಲಯದ ನ್ಯಾಯಾಧೀಶ ವಿಜಯೇಂದ್ರ ಅವರು ಚಿನ್ನಯ್ಯನ ಜಾಮೀನು ಅರ್ಜಿ ವಜಾ ಮಾಡಿ ಆದೇಶ ಹೊರಡಿಸಿದ್ದಾರೆ.

ಇನ್ನೂ ಧರ್ಮಸ್ಥಳದ ಸುತ್ತಮುತ್ತ ನೂರಾರು ಶವ ಹೂತಿದ್ದಾಗಿ ಮಾಸ್ಕ್ ಮ್ಯಾನ್ ಚಿನ್ನಯ್ಯ ಆರೋಪಿಸಿದ್ದು, ಬಳಿಕ ಎಸ್ಐಟಿ ತನಿಖೆ ವೇಳೆ ಯಾವುದೇ ಮನುಷ್ಯನ ಕಳೇಬರಹಗಳು ಪತ್ತೆಯಾಗಿಲ್ಲ. ಬಳಿಕ ಎಸ್ಐಟಿ ಅಧಿಕಾರಿಗಳು ಚಿನ್ನಯ್ಯನನ್ನೇ ಬಂಧಿಸಿ ಆತನನಿಂದ ಮಹತ್ವದ ಮಾಹಿತಿ ಸಂಗ್ರಹಿಸಿ ಜೈಲಿಗಟ್ಟಿದ್ದಾರೆ. ಇತ್ತ ಚಿನ್ನಯ್ಯ ಸಹ ಜಾಮೀನು ಕೋರಿ ಸಲ್ಲಿಸಿದ್ದ ಅರ್ಜಿ ವಜಾಗೊಂಡಿದೆ.

## ಲಂಚ ಸ್ವೀಕಾರ ಆರೋಪ; ಮೂವರು ವೈದ್ಯರು ಸಸ್ಪೆಂಡ್

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಲಂಚ ಪಡೆದು ಸಿಕ್ಕಿಬಿದ್ದ ಬೆಂಗಳೂರು, ಬೀದರ್, ಮಂಡ್ಯದ ಮೂವರು ವೈದ್ಯರನ್ನು ಅಮಾನತು ಮಾಡಿ ವೈದ್ಯಕೀಯ ಶಿಕ್ಷಣ ಇಲಾಖೆ ಆದೇಶ ಹೊರಡಿಸಿದೆ.

ಬೆಂಗಳೂರಿನ ಅಟಲ್ ಬಿಹಾರಿ ವಾಜಪೇಯಿ, ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಶರೀರ ಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ. ಚೈತ್ರ ಎಂ.ಎಸ್, ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಮೂಳೆ ಚಿಕಿತ್ಸಾ ವಿಭಾಗದ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರಾದ ಡಾ. ಮಂಜಪ್ಪ ಸಿ.ಎನ್, ಬೀದರ್ ವೈದ್ಯಕೀಯ ವಿಜ್ಞಾನ ಸಂಸ್ಥೆ ಸಮುದಾಯ ವೈದ್ಯಕೀಯ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಅಶೋಕ್ ಸೆಲ್ಕೆ ಅವರನ್ನು ಅಮಾನತುಗೊಳಿಸಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಮೊಹಮ್ಮದ್ ಮೊಹಸಿನ್ ಆದೇಶ ಹೊರಡಿಸಿದ್ದಾರೆ.

ಲಂಚ ಸ್ವೀಕಾರ ಆರೋಪದ ಹಿನ್ನೆಲೆಯಲ್ಲಿ ತನಿಖೆ ನಡೆಸಿದ ಸಿಬಿಐ ಈಗಾಗಲೇ ಎಫ್ಐಆರ್ ದಾಖಲಿಸಿದೆ ಎಂದು ವರದಿ ಮಾಡಿದೆ. ಈ ಕುರಿತು ಸಿಬಿಐ ಇಲಾಖೆಗೆ ಇ-ಮೇಲ್ ಮೂಲಕ ಮಾಹಿತಿ ರವಾನಿಸಿದೆ. ಈ ಹಿನ್ನೆಲೆಯಲ್ಲಿ ಈ ಮೂವರ ಅಮಾನತಿಗೆ ಇಲಾಖೆಯ ನಿಯಮಾನುಸಾರ ಕ್ರಮ ಕೈಗೊಳ್ಳಲಾಗಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

## ಕೆರೆಗೆ ಉರುಳಿಬಿದ್ದ ಕಾರು; ಓರ್ವ ವೃದ್ಧೆ ಸಾವು, ಇಬ್ಬರು ಗಂಭೀರ!

■ವಿಜಯಸಾಕ್ಷಿ ಸುದ್ದಿ, ಶಿವಮೊಗ್ಗ

ಕಾರೊಂದು ಚಾಲಕನ ನಿಯಂತ್ರಣ ತಪ್ಪಿ ಕೆರೆಗೆ ಉರುಳಿಬಿದ್ದ ಪರಿಣಾಮ ಓರ್ವ ವೃದ್ಧೆ ಸಾವನ್ನಪ್ಪಿರುವ ಘಟನೆ ರಿಪ್ಪನ್‌ಪೇಟೆಯಲ್ಲಿ ಜರುಗಿದೆ.

ಘಟನೆಯಲ್ಲಿ ಇನ್ನಿಬ್ಬರಿಗೆ ಗಂಭೀರ ಗಾಯವಾಗಿದೆ ಎನ್ನಲಾಗಿದೆ. 65 ವರ್ಷದ ಪಾರ್ವತಮ್ಮ ಮೃತ ವೃದ್ಧೆ. ತ್ಯಾಗರ್ತಿಯಿಂದ ಅಮ್ಮನಘಟ್ಟ ಜೇನುಕಲ್ಲಮ್ಮ ದೇವಿಯ ದರ್ಶನ ಪಡೆದು ಹಿಂದಿರುಗುತ್ತಿದ್ದ ವೇಳೆ ಪಟ್ಟಣದ ಚಿಪ್ಪಿಗರ ಕೆರೆ ಏರಿಯ ಬಳಿ ಚಾಲಕನ ನಿಯಂತ್ರಣ ತಪ್ಪಿ ಕಾರು ಕೆರೆಗೆ ಉರುಳಿ ಬಿದ್ದಿದೆ. ಈ ಸಂದರ್ಭದಲ್ಲಿ ರಸ್ತೆಯಲ್ಲಿ ಹಾದುಹೋಗುತಿದ್ದ ಸಾರ್ವಜನಿಕರು ಕೂಡಲೇ ಸಹಾಯಕ್ಕೆ ತೆರಳಿ ಇಬ್ಬರನ್ನು ರಕ್ಷಿಸಿದ್ದಾರೆ.

ಅಷ್ಟರಲ್ಲಾಗಲೇ ವೃದ್ಧೆಯ ಪ್ರಾಣಪಕ್ಷಿ ಹಾರಿಹೋಗಿತ್ತು.

ಕಾರಿನಲ್ಲಿದ್ದ ಯುವಕ ಹಾಗೂ ಯುವತಿಯನ್ನು ಸ್ಥಳೀಯರು ಜೀವದ ಹಂಗು ತೊರೆದು ಕಾಪಾಡಿ ತಕ್ಷಣ ಸ್ಥಳೀಯ ಆಸ್ಪತ್ರೆಗೆ ಕರೆತಂದಿದ್ದರು. ಗಾಯಾಳುಗಳಿಗೆ ಪ್ರಾಥಮಿಕ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗೆ ಶಿವಮೊಗ್ಗಕ್ಕೆ ರವಾನಿಸಲಾಗಿದೆ.

### ಉಚ್ಚಂಗಿದುರ್ಗದಲ್ಲಿ ನಡೆದ ಜನಾಭಿಪ್ರಾಯ ಸಭೆಯಲ್ಲಿ ಮಿಶ್ರ ಪ್ರತಿಕ್ರಿಯೆ । ಮೂಡದ ಒಮ್ಮತ

# ಮಲತಾಯಿ ಧೋರಣೆಗಿಲ್ಲವೇ ಮುಕ್ತಿ?



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ತಾಲೂಕಿನ ಅರಸೀಕೆರೆ ಹೋಬಳಿಯನ್ನು ದಾವಣಗೆರೆ ಜಿಲ್ಲೆಗೆ ಮರು ಸೇರ್ಪಡೆಗೊಳಿಸಲು ಒತ್ತಾಯಿಸಿ ಉಚ್ಚಂಗಿದುರ್ಗದ ಹಾಲಮ್ಮನ ತೋಪಿನಲ್ಲಿ ಕರೆದಿದ್ದ ವಿವಿಧ ಸಂಘಟನೆಗಳ ಮುಖಂಡರ ಜನಾಭಿಪ್ರಾಯ ಸಭೆಯಲ್ಲಿ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಯಿತು.

ಅರಸೀಕೆರೆ, ಉಚ್ಚಂಗಿದುರ್ಗ, ಹೊಸಕೋಟೆ, ತೌಡೂರು, ಪುಣಭಗಟ್ಟ, ಅಣಜಿಗೆರೆ, ಚಟ್ನಿಹಳ್ಳಿ, ಹಿರೇಮೇಗಳಗೆರೆ, ಕಂಚಿಕೆರೆ, ಲಕ್ಷ್ಮೀಪುರ, ಮತ್ತು ಶಿಂಗ್ರಿಹಳ್ಳಿ, ಒಟ್ಟು 11 ಪಂಚಾಯಿತಿಗಳನ್ನು ದಾವಣಗೆರೆ ಜಿಲ್ಲೆಗೆ ಸೇರಿಸಲು ಕರೆದಿದ್ದ ಸಭೆಯಲ್ಲಿ ಒಮ್ಮತ ಮೂಡಲಿಲ್ಲ.

> ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಮಸ್ಯೆಗಳ ಬಗ್ಗೆ ಧ್ವನಿ ಎತ್ತಲು ಎಲ್ಲರಿಗೂ ಅಧಿಕಾರವಿದೆ. ಅರಸೀಕೆರೆ-ಉಚ್ಚಂಗಿದುರ್ಗ ಭಾಗದ ಜನರ ಪ್ರತ್ಯೇಕ ತಾಲೂಕಿನ ಹೋರಾಟದ ಬಗ್ಗೆ ನನ್ನ ಗಮನಕ್ಕೆ ಬಂದಿಲ್ಲ.
>
> **– ಬಿ.ದೇವೇಂದ್ರಪ್ಪ.**
> ಜಗಳೂರು ಶಾಸಕರು.

ಅರಸೀಕೆರೆ ಹೋಬಳಿಯ 7 ಗ್ರಾಮ ಪಂಚಾಯಿತಿಗಳು ವಿಧಾನಸಬಾ ಕ್ಷೇತ್ರ ಜಗಳೂರಿಗೆ ಒಳಪಟ್ಟರೆ, ಉಳಿದ ಪಂಚಾಯಿತಿಗಳು ಹರಪನಹಳ್ಳಿ ವಿಧಾನಸಭಾ ಕ್ಷೇತ್ರಕ್ಕೆ ಸೇರುತ್ತವೆ. ಹರಿದು ಹಂಚಿರುವ ಹೋಬಳಿ ವ್ಯಾಪ್ತಿಯ ಹಳ್ಳಿಗಳಲ್ಲಿ ಅಭಿವೃದ್ಧಿ ಕುಂಠಿತಗೊಂಡು, ಜನಪ್ರತಿನಿಧಿಗಳ ನಿರ್ಲಕ್ಷ್ಯಕ್ಕೂ ಒಳಗಾಗಿವೆ.

ಈ ಭಾಗದ ಜನತೆ ಎರಡು ತಾಲೂಕುಗಳ ಮಲತಾಯಿ ಧೋರಣೆಯಿಂದ ಬೇಸತ್ತು ಹೋಗಿದ್ದು, ಉಚ್ಚಂಗಿದುರ್ಗ ಅಥವಾ ಅರಸೀಕೆರೆ ಗ್ರಾಮವನ್ನು ತಾಲೂಕು ಕೇಂದ್ರವಾಗಿ ಮಾಡಿಕೊಂಡು 11 ಪಂಚಾಯಿತಿಗಳ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು ಎಂದು ಕೆಲವರು ತಿಳಿಸಿದರೆ, ಇನ್ನೂ ಕೆಲವರು ದಾವಣಗೆರೆಯು ವ್ಯಾವಹಾರಿಕವಾಗಿ ಮತ್ತು ಭಾವನಾತ್ಮಕವಾಗಿ ಈ ಭಾಗದ ಜನತೆಯೊಂದಿಗೆ ಬೆಸೆದುಕೊಂಡಿದ್ದು ದಾವಣಗೆರೆ ತಾಲೂಕಿಗೆ ಸೇರ್ಪಡೆಯಾಗಬೇಕು ಎಂದು ಅಭಿಪ್ರಾಯಪಟ್ಟರು.

ಹೋಬಳಿ ವ್ಯಾಪ್ತಿಯ ಹಿರೇಮೇಗಳಗೇರೆ, ಚಿಕ್ಕಮೇಗಳಗೆರೆ, ಜಂಬುಲಿಂಗನಹಳ್ಳಿ ಸೇರಿ ಹಲವು ಗಡಿಭಾಗದ ಹಳ್ಳಿಗಳು ದಾವಣಗೆರೆಗೆ ಕೇವಲ 7ರಿಂದ 8 ಕಿಮಿ ಅಂತರವಿದ್ದು, ತಾಲೂಕು ಕೇಂದ್ರ ಹರಪನಹಳ್ಳಿ 45 ಕಿ.ಮೀ, ಜಿಲ್ಲಾ ಕೇಂದ್ರ 110 ಕಿ.ಮೀ ದೂರದಲ್ಲಿದೆ. ಇದರಿಂದ ಜನಸಾಮಾನ್ಯರು ಕೆಲಸಕ್ಕೆ ಅಲೆದಾಡುತ್ತಿದ್ದಾರೆ ಎಂಬ ವಾದವನ್ನು ಮಂಡಿಸಿದರು.


2018ರಲ್ಲಿ ದಾವಣಗೆರೆಯಿಂದ ಬೇರ್ಪಟ್ಟು ಕಲ್ಯಾಣ ಕರ್ನಾಟಕ ಭಾಗಕ್ಕೆ ಸೇರಿದ್ದರಿಂದ ನಮಗೆ ಹೆಚ್ಚಿನ ಅನುದಾನ ಸಿಗುತ್ತಿದೆ. 371-ಜೆ ಪ್ರಮಾಣಪತ್ರ ಸೌಲಭ್ಯದಿಂದಾಗಿ ಶಿಕ್ಷಣ, ಉದ್ಯೋಗದಲ್ಲಿ ಈ ಭಾಗದ ಮಕ್ಕಳು ಉನ್ನತ ಶಿಕ್ಷಣ, ಉನ್ನತ ಹುದ್ದೆಗಳನ್ನು ಪಡೆಯಲು ಸಹಕಾರಿಯಾಗಿದೆ. ಹಾಗಾಗಿ ಅರಸೀಕೆರೆ ಅಥವಾ ಉಚ್ಚಂಗಿದುರ್ಗವನ್ನು ಪ್ರತ್ಯೇಕ ತಾಲೂಕು ರಚನೆಗೆ ಹೋರಾಟ ಮಾಡುವುದು ಸೂಕ್ತವೆಂದು ಕೆಲ ಮುಖಂಡರು ಅಭಿಪ್ರಾಯಪಟ್ಟರು.

> ಉಚ್ಚಂಗಿದುರ್ಗ ಭಾಗದಲ್ಲಿ ಕೆಲ ಪಟ್ಟಭದ್ರ ಹಿತಾಸಕ್ತಿಗಳು ಗಣಿ ಉದ್ಯಮವನ್ನು ಮಾಡಿಕೊಂಡಿದ್ದಾರೆ. ಅವರ ಬಂಡವಾಳ ಹೆಚ್ಚಿಸಿಕೊಳ್ಳಲು ದಾವಣಗೆರೆ ಜಿಲ್ಲೆಗೆ ಸೇರಬೇಕೆಂಬುದು ಕೇವಲ ಬೆರಳಣಿಕೆಯಷ್ಟು ಜನರ ಕೂಗಾಗಿದೆ. ಅವರಿಗೆ ಶ್ರೀಸಾಮಾನ್ಯರ ಅಭಿವೃದ್ಧಿ ಬೇಕಾಗಿಲ್ಲ. 371-ಜೆ ಸೌಲಭ್ಯದಿಂದ ಅರಸೀಕೆರೆ ಹೋಬಳಿ ಸೇರಿದಂತೆ ತಾಲೂಕಿನಾದ್ಯಂತ ಹಲವಾರು ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆದು ಸರ್ಕಾರಿ ನೌಕರಿ ಗಿಟ್ಟಿಸಿಕೊಂಡಿದ್ದಾರೆ. ಅಂತಹವರಿಗೆ ಅನ್ಯಾಯವಾಗಲು ಬಿಡುವುದಿಲ್ಲ. ದಾವಣಗೆರೆ ಅಥವಾ ಪ್ರತ್ಯೇಕ ತಾಲೂಕು ಮಾಡುವುದು ಬೇಡ ಎಂದು ಸಿಎಂ ಸಿದ್ದರಾಮಯ್ಯನವರಿಗೆ ಸದ್ಯದಲ್ಲೇ ಮನವಿ ಸಲ್ಲಿಸುತ್ತೇನೆ.
>
> **– ವೈ. ದೇವೇಂದ್ರಪ್ಪ ಅರಸೀಕೆರೆ.**

> ಮತದಾನ ಜಗಳೂರು ಹಾಗೂ ಆಡಳಿತಾತ್ಮಕವಾಗಿ ಹರಪನಹಳ್ಳಿಗೆ ಸೇರಿರುವ ಅರಸೀಕೆರೆ ಹೋಬಳಿಯ ಗ್ರಾಮ ಪಂಚಾಯಿತಿಗಳು ಹಲವಾರು ದಶಕಗಳಿಂದ ಅಬಿವೃದ್ಧಿ ಕಾಣದೆ ಸಾಕಷ್ಟು ತೊಂದರೆ ಅನುಭವಿತ್ತಾ ಅನಿವಾರ್ಯವಾಗಿ ಸಂಕಷ್ಟಕ್ಕೆ ಸಿಲುಕಿದೆ. ಈ ಎರಡೂ ತಾಲೂಕುಗಳ ಮಲತಾಯಿ ಧೋರಣೆಯ ಕೊಂಡಿಯಿಂದ ಕಳಚಿ ಪ್ರತ್ಯೇಕ ತಾಲೂಕು ಆದರೆ ನಮಗೆ ಎಲ್ಲಾ ರೀತಿಯಿಂದಲೂ ಅನುಕೂಲವಾಗಲಿದೆ.
>
> **– ಕೆಂಚಪ್ಪ ಕೆ.ಉಚ್ಚಂಗಿದುರ್ಗ.**
> ಗ್ರಾಮಸ್ಥರು.

ನಂಜುಂಡಪ್ಪ ವರದಿಯನ್ವಯ ಹರಪನಹಳ್ಳಿ ತಾಲೂಕು ಅತೀ ಹಿಂದುಳಿದ ತಾಲೂಕುಗಳಲ್ಲಿ ಒಂದಾಗಿದ್ದು, ಕ್ಷೇತ್ರದಲ್ಲಿ ಬಡ ವರ್ಗದ ಜನರ ಅವರ ಸರ್ವತೋಮುಖ ಅಭಿವೃದ್ಧಿಗೆ ಬಳ್ಳಾರಿಗೆ ಸೇರಿಸಲು ವಿವಿಧ ಸಂಘಟನೆಗಳು, ಸ್ಥಳೀಯ ಮಠಾಧೀಶರು, ಎಲ್ಲಾ ರಾಜಕೀಯ ಮುಖಂಡರು ಹೋರಾಟ ಮಾಡಿದ ಫಲವಾಗಿ ಹರಪನಹಳ್ಳಿಯು 371ಜೆ ಸೌಲಭ್ಯ ಪಡೆದು ಇಂದು ಅರಸೀಕೆರೆ ಹೋಬಳಿ ಸೇರಿದಂತೆ ಎಲ್ಲಾ ವರ್ಗದ ಜನರೂ ಇದರ ಸಂಪೂರ್ಣ ಸೌಲಭ್ಯ ಪಡೆದು ಅಭಿವೃದ್ಧಿಯತ್ತ ಸಾಗುತ್ತಿರುವಾಗಲೇ ಪ್ರತ್ಯೇಕ ತಾಲೂಕಿನ ಕೂಗು ಕೇಳಿಬಂದಿದೆ.

## 2008ರ ಮಾಲೆಗಾಂವ್ ಸ್ಫೋಟ ಪ್ರಕರಣ: ಖುಲಾಸೆ ತೀರ್ಪಿನ ವಿರುದ್ಧ ಮೇಲ್ಮನವಿ ಸಲ್ಲಿಸಲು 'ಎಲ್ಲರಿಗೂ ಮುಕ್ತ ಅವಕಾಶವಿಲ್ಲ': ಬಾಂಬೆ ಹೈಕೋರ್ಟ್



■ವಿಜಯಸಾಕ್ಷಿ ಸುದ್ದಿ, ಮುಂಬೈ

2008ರ ಮಾಲೆಗಾಂವ್ ಸ್ಫೋಟ ಪ್ರಕರಣದಲ್ಲಿ ಆರೋಪಿಗಳ ಖುಲಾಸೆ ವಿರುದ್ಧ ಮೇಲ್ಮನವಿ ಸಲ್ಲಿಸಲು 'ಎಲ್ಲರಿಗೂ ಮುಕ್ತ ಅವಕಾಶವಿಲ್ಲ' ಎಂದು ಮಂಗಳವಾರ ಬಾಂಬೆ ಹೈಕೋರ್ಟ್ ಹೇಳಿದ್ದು, ಸಂತ್ರಸ್ತರ ಕುಟುಂಬದ ಸದಸ್ಯರನ್ನು ವಿಚಾರಣೆಯಲ್ಲಿ ಸಾಕ್ಷಿಗಳಾಗಿ ಪರಿಶೀಲಿಸಲಾಗಿದೆಯೇ ಎಂಬ ಬಗ್ಗೆ ವಿವರಗಳನ್ನು ಕೇಳಿದೆ.

ಸ್ಫೋಟದಲ್ಲಿ ಸಾವನ್ನಪ್ಪಿದ ಆರು ಜನರ ಕುಟುಂಬ ಸದಸ್ಯರು ಸಲ್ಲಿಸಿದ ಮೇಲ್ಮನವಿಯನ್ನು ಮುಖ್ಯ ನ್ಯಾಯಮೂರ್ತಿ ಚಂದ್ರಶೇಖರ್ ಮತ್ತು ನ್ಯಾಯಮೂರ್ತಿ ಗೌತಮ್ ಅನ್ಖಡ್ ಅವರ ಪೀಠವು ಆಲಿಸಿತು. ಈ ಮೇಲ್ಮನವಿಯಲ್ಲಿ, ಮಾಜಿ ಬಿಜೆಪಿ ಸಂಸದೆ ಪ್ರಜ್ಞಾ ಸಿಂಗ್ ಠಾಕೂರ್ ಮತ್ತು ಲೆಫ್ಟಿನೆಂಟ್ ಕರ್ನಲ್ ಪ್ರಸಾದ್ ಪುರೋಹಿತ್ ಸೇರಿದಂತೆ ಪ್ರಕರಣದ ಏಳು ಆರೋಪಿಗಳನ್ನು ಖುಲಾಸೆಗೊಳಿಸಿದ ವಿಶೇಷ ನ್ಯಾಯಾಲಯದ ತೀರ್ಪನ್ನು ಪ್ರಶ್ನಿಸಲಾಗಿದೆ.

ಮಂಗಳವಾರ ಹೈಕೋರ್ಟ್ ಪೀಠವು, ಕುಟುಂಬದ ಸದಸ್ಯರನ್ನು ವಿಚಾರಣೆಯಲ್ಲಿ ಸಾಕ್ಷಿಗಳಾಗಿ ಪರಿಶೀಲಿಸಲಾಗಿದೆಯೇ ಎಂದು ತಿಳಿದುಕೊಳ್ಳಲು ಬಯಸಿತು. ಕುಟುಂಬ ಸದಸ್ಯರ ವಕೀಲರು, ಮೇಲ್ಮನವಿ ಸಲ್ಲಿಸಿದ ಮೊದಲ ವ್ಯಕ್ತಿ ನಿಸಾರ್ ಅಹ್ಮದ್, ಅವರ ಮಗ ಸ್ಫೋಟದಲ್ಲಿ ಸಾವನ್ನಪ್ಪಿದ್ದಾರೆ. ಆದರೆ ಅವರು ವಿಚಾರಣೆಯಲ್ಲಿ ಸಾಕ್ಷಿಯಾಗಿರಲಿಲ್ಲ, ಇದರ ಬಗ್ಗೆ ಬುಧವಾರ ವಿವರಗಳನ್ನು ಸಲ್ಲಿಸುವುದಾಗಿ ಹೇಳಿದರು.

ಪೀಠವು, ಮೇಲ್ಮನವಿದಾರನ ಮಗ ಸ್ಫೋಟದಲ್ಲಿ ಸಾವನ್ನಪ್ಪಿದ್ದರೆ, ಅವರು (ನಿಸಾರ್ ಅಹ್ಮದ್) ಸಾಕ್ಷಿಯಾಗಬೇಕಿತ್ತು ಎಂದು ಹೇಳಿತು.

"ನೀವು (ಅರ್ಜಿದಾರರು) ಸಾಕ್ಷಿಗಳಾಗಿದ್ದೀರಾ ಅಥವಾ ಇಲ್ಲವೇ ಎಂದು ಸೂಚಿಸಬೇಕು. ನಮಗೆ ವಿವರಗಳನ್ನು ನೀಡಿ. ಇದು ಎಲ್ಲರಿಗೂ ಮುಕ್ತ ಅವಕಾಶವಲ್ಲ" ಎಂದು ಹೈಕೋರ್ಟ್ ಹೇಳಿದೆ.

ನ್ಯಾಯಾಲಯವು ಪ್ರಕರಣದ ಮುಂದಿನ ವಿಚಾರಣೆಯನ್ನು ಬುಧವಾರಕ್ಕೆ ಮುಂದೂಡಿದೆ.

ಕಳೆದ ವಾರ ಸಲ್ಲಿಸಲಾದ ಮೇಲ್ಮನವಿಯಲ್ಲಿ, ದೋಷಪೂರಿತ ತನಿಖೆ ಅಥವಾ ತನಿಖೆಯಲ್ಲಿನ ಕೆಲವು ದೋಷಗಳು ಆರೋಪಿಗಳನ್ನು ಖುಲಾಸೆಗೊಳಿಸಲು ಆಧಾರವಾಗುವುದಿಲ್ಲ ಎಂದು ಹೇಳಲಾಗಿದೆ.




ಗಾನಯೋಗಿ ಡಾ. ಪಂ. ಪುಟ್ಟರಾಜ ಸೇವಾ ಸಮಿತಿ ಗದಗ, ಶ್ರೀ ಗುರು ಪುಟ್ಟರಾಜ ಸಂಗೀತ ಶಿಕ್ಷಣ ಸಮಿತಿ ಯಳವತ್ತಿ ಹಾಗೂ ಯಳವತ್ತಿ ಗ್ರಾಮಸ್ಥರ ಸಹಯೋಗದಲ್ಲಿ ಪರಮಪೂಜ್ಯ ಪದ್ಮಭೂಷಣ ಡಾ. ಪಂ. ಪುಟ್ಟರಾಜ ಕವಿ ಶಿವಯೋಗಿಗಳವರ 15ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ಯಳವತ್ತಿ ಗ್ರಾಮಸ್ಥರು ಪ್ರಸಾದ ಸೇವೆಗಾಗಿ 30 ಸಾವಿರ ಸಜ್ಜಕದ ಹೋಳಿಗೆಗಳನ್ನು ಸಿದ್ಧಪಡಿಸಿದ್ದರು.

## 'ಸಂಗಮಸಿರಿ' ಪ್ರಶಸ್ತಿಗೆ ಕೃತಿಗಳ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಸಾಹಿತ್ಯ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಹಿತಿ ಡಾ. ಸಂಗಮೇಶ ಹಂಡಿಗಿ ಅವರ ಸ್ಮರಣೆಯಲ್ಲಿ ಡಾ. ಸಂಗಮೇಶ ಹಂಡಿಗಿ ಸಾಹಿತ್ಯ ಪ್ರತಿಷ್ಠಾನ ನೀಡುವ 2025ನೇ ಸಾಲಿನ ರಾಜ್ಯಮಟ್ಟದ 'ಸಂಗಮಸಿರಿ ಪ್ರಶಸ್ತಿ'ಯನ್ನು 'ಶರಣರು ಹಾಗೂ ವಚನ ಸಾಹಿತ್ಯ'ದ ಪೂರಕ ಕೃತಿಗಳಿಗೆ ನೀಡಲು ನಿರ್ಧರಿಸಲಾಗಿದೆ.



ಈ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರು ತಮ್ಮ ಮಾಹಿತಿಯನ್ನು ಹಾಗೂ ಸಾಹಿತ್ಯದ ವಿವರಗಳನ್ನು ಅಕ್ಟೋಬರ್ 15ರ ಒಳಗೆ ಡಾ. ಸಂಗಮೇಶ ಹಂಡಿಗಿ ಸಾಹಿತ್ಯ ಪ್ರತಿಷ್ಠಾನ, ಮನೆ ನಂಬರ್ 338, ಬಸವ ಬನಸಿರಿ, ಗೋಕುಲ್ ರಸ್ತೆ ಹುಬ್ಬಳ್ಳಿ-580030 ಇಲ್ಲಿಗೆ ಕಳಿಸಲು ಪ್ರತಿಷ್ಠಾನದ ಅಧ್ಯಕ್ಷ ಜಿ.ಬಿ. ಗೌಡಪ್ಪಗೊಳ, ಗೌರವಾಧ್ಯಕ್ಷ ಗಣಪತಿ ಗಂಗೊಳ್ಳಿ, ಸಂಯೋಜಕ ಡಾ. ಪ್ರಭು ಗಂಜಿಹಾಳ ತಿಳಿಸಿದ್ದಾರೆ.

ಪ್ರಶಸ್ತಿಯು 10 ಸಾವಿರ ರೂ ನಗದು ಹಾಗೂ ಪ್ರಶಸ್ತಿ ಫಲಕ ಒಳಗೊಂಡಿದೆ. ಮಾಹಿತಿಗಾಗಿ ಮೊ-9060933596, 9986476733 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಡಾ. ಪಂ. ಪುಟ್ಟರಾಜ ಕವಿ ಶಿವಯೋಗಿಗಳವರ 15ನೇ ಪುಣ್ಯಸ್ಮರಣೋತ್ಸವ ಕಾರ್ಯಕ್ರಮ

# ಗುರುನಿಷ್ಠೆಯಿದ್ದರೆ ಕಷ್ಟಗಳಿಗೆ ಪರಿಹಾರ



■ವಿಜಯಸಾಕ್ಷಿ ಸುದ್ದಿ, ಗದಗ

ಪಂ. ಪುಟ್ಟರಾಜ ಕವಿ ಗವಾಯಿಗಳವರು ಜಗತ್ತಿನ ಕಲ್ಯಾಣಕ್ಕಾಗಿ ಬದುಕಿದವರು. ಅವರನ್ನು ಜಗತ್ತು ಸದಾ ಸ್ಮರಿಸುತ್ತದೆ ಎಂದು ನೀಲಗುಂದ ಶ್ರೀ ಗುದ್ನೇಶ್ವರ ಮಠದ ಪೂಜ್ಯಶ್ರೀ ಪ್ರಭುಲಿಂಗ ಮಹಾಸ್ವಾಮಿಗಳು ಹೇಳಿದರು.

ಅವರು ಗಾನಯೋಗಿ ಡಾ. ಪಂ. ಪುಟ್ಟರಾಜ ಸೇವಾ ಸಮಿತಿ ಗದಗ, ಶ್ರೀ ಗುರು ಪುಟ್ಟರಾಜ ಸಂಗೀತ ಶಿಕ್ಷಣ ಸಮಿತಿ ಯಳವತ್ತಿ ಹಾಗೂ ಯಳವತ್ತಿ ಗ್ರಾಮಸ್ಥರ ಸಹಯೋಗದಲ್ಲಿ ಪರಮಪೂಜ್ಯ ಪದ್ಮಭೂಷಣ ಡಾ. ಪಂ. ಪುಟ್ಟರಾಜ ಕವಿ ಶಿವಯೋಗಿಗಳವರ 15ನೇ ಪುಣ್ಯಸ್ಮರಣೋತ್ಸವದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪಂ. ಪಂಚಾಕ್ಷರಿ ಗವಾಯಿಗಳವರ ಕೃಪೆಯಿಂದ ಪುಟ್ಟರಾಜ ಕವಿ ಗವಾಯಿಗಳು ಅದ್ಭುತ ಲೋಕವನ್ನು ಸೃಷ್ಟಿಸಿದರು. ಗುರುವಿನ ನಿಷ್ಠೆ ಗಟ್ಟಿಯಾದರೆ ಕಷ್ಟಗಳಿಗೆ ಪರಿಹಾರ ಸಿಗುತ್ತದೆ ಎಂಬುದಕ್ಕೆ ಪಂ. ಪುಟ್ಟರಾಜ ಕವಿ ಗವಾಯಿಗಳವರ ಗುರುನಿಷ್ಠೆ ಕಾರಣವಾಗಿದೆ ಎಂದು ಹೇಳಿದರು.

ಪಾವನ ಸಾನ್ನಿಧ್ಯ ವಹಿಸಿದ್ದ ಹರ್ಲಾಪುರ ಕೊಟ್ಟೂರೇಶ್ವರ ಶ್ರೀಮಠದ ಪೂಜ್ಯಶ್ರೀ ಕೊಟ್ಟೂರೇಶ್ವರ ಶ್ರೀಗಳು ಮಾತನಾಡಿ, ಯಳವತ್ತಿ ಗ್ರಾಮದಲ್ಲಿ ಪುಟ್ಟರಾಜ ಗವಾಯಿಗಳವರ ಪುಣ್ಯಸ್ಮರಣೋತ್ಸವ ನೆಪದಲ್ಲಿ ಆಧ್ಯಾತ್ಮಿಕ ಚಿಂತನ ನಡೆಯುತ್ತಿರುವುದು ಸ್ವಾಗತಾರ್ಹವಾಗಿದೆ. ಏಳೇಳು ಜನ್ಮದ ಪುಣ್ಯದ ಫಲದಿಂದ ಯಳವತ್ತಿ ಗ್ರಾಮದಲ್ಲಿ ಈ ಕಾರ್ಯಕ್ರಮ ಜರುಗುತ್ತಿದೆ. ನಿಸ್ವಾರ್ಥ ಸೇವೆಗೆ ಶ್ರೀಗಳ ಆಶೀರ್ವಾದ ಸದಾ ಇರುತ್ತದೆ. ವೀರೇಶ್ವರ ಪುಣ್ಯಾಶ್ರಮದಲ್ಲಿ ಕಲಿತ ವಿದ್ಯಾರ್ಥಿಗಳು ಸಾಕಷ್ಟು ಸಾಧನೆ ಮಾಡುವ ಮೂಲಕ ಉದಯ ಗುರುಗಳ ಹೆಸರನ್ನು ಅಜರಾಮರಗೊಳಿಸಿದ್ದಾರೆ ಎಂದು ಹೇಳಿದರು.

> ಅಧ್ಯಕ್ಷತೆ ವಹಿಸಿದ್ದ ಗದುಗಿನ ಶ್ರೀ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಪೂಜ್ಯಶ್ರೀ ಕಲ್ಲಯ್ಯಜ್ಜನವರು ಮಾತನಾಡಿ, ವೀರೇಶ್ವರ ಪುಣ್ಯಾಶ್ರಮದಲ್ಲಿ ಪ್ರತಿವರ್ಷ ಗುರುಗಳ ಪುಣ್ಯಸ್ಮರಣೋತ್ಸವ ನಡೆದುಕೊಂಡು ಬರುತ್ತಿದೆ. ಅಂತೆಯೇ ಗುರುಗಳ ಜೀವನ ದರ್ಶನ ಚಿಂತನೆಗಳನ್ನು ಎಲ್ಲಿ ಹರಡುತ್ತದೆಯೋ ಆ ಕ್ಷೇತ್ರ ಪಾವನವಾಗುತ್ತದೆ ಎಂದರು.

ಧಾರವಾಡ-ಹುಬ್ಬಳ್ಳಿ ಮಹಾನಗರ ಪಾಲಿಕೆಯ ಮಹಾಪೌರರಾದ ಜ್ಯೋತಿ ಪಾಟೀಲ ಮಾತನಾಡಿ, ಸಂತರ, ಶರಣರ ಪ್ರವಚನ ಆಲಿಸುವುದರಿಂದ ಒತ್ತಡದ ಜೀವನದಲ್ಲಿ ದಣಿದ ಮನಸ್ಸಿಗೆ ನೆಮ್ಮದಿ, ಶಾಂತಿ ಲಭಿಸುತ್ತದೆ. ಬಿತ್ತಿದ ಬೀಜ ಬೆಳೆ ಆಗುವಂತೆ ಪ್ರವಚನದ ಬೀಜ ಮನಸ್ಸಿಗೆ ನೆಮ್ಮದಿ ನೀಡುತ್ತದೆ. ನಾನು ಕೂಡ ಇದೇ ಗ್ರಾಮದ ಮೊಮ್ಮಗಳಾಗಿದ್ದು, ಇಲ್ಲಿನ ಜನರ ಪ್ರೀತಿ-ವಿಶ್ವಾಸವನ್ನು ನಾನು ಎಂದಿಗೂ ಮರೆಯುವುದಿಲ್ಲ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಸಂಗೀತ ಕ್ಷೇತ್ರದಲ್ಲಿ ಸಾಧನೆ ಮಾಡಿದ ಗದುಗಿನ ಪಂ. ವೀರೇಶ ಕಿತ್ತೂರ, ಕೊಪ್ಪಳದ ಪಂ. ಸದಾಶಿವ ಪಾಟೀಲ ಹಾಗೂ ಬೆಂಗಳೂರಿನ ಪಂ. ನಾಗಲಿಂಗಯ್ಯ ಗವಾಯಿಗಳು ಅವರಿಗೆ ಶಿವಯೋಗಿ ಶ್ರೀ ಪುಟ್ಟರಾಜ ಪ್ರಶಸ್ತಿ ಪ್ರದಾನ ಮಾಡಲಾಯಿತು. ಕಾರ್ಯಕ್ರಮದಲ್ಲಿ ಸಿದ್ದಲಿಂಗಯ್ಯಸ್ವಾಮಿ ಹಿರೇಮಠ, ಗ್ರಾ.ಪಂ ಅಧ್ಯಕ್ಷರಾದ ರೇಷ್ಮಾಬಾನು ಹಳೆಮನೆ, ಬಿ. ಶ್ರೀರಾಮುಲು ಅವರ ಆಪ್ತ ಸಹಾಯಕ ಎಸ್.ಎಚ್. ಶಿವನಗೌಡ್ರ, ಮುದುಕಯ್ಯಸ್ವಾಮಿ ಹಿರೇಮಠ, ಸಮಾಜಸೇವಕ ಉಮೇಶ ಹಡಪದ ಮುಂತಾದವರು ಉಪಸ್ಥಿತರಿದ್ದರು.

ಈರಣ್ಣ ಹತ್ತಿಕಾಳ ಸ್ವಾಗತಿಸಿದರು. ಹರ್ಲಾಪುರದ ಸದಾನಂದಶಾಸ್ತ್ರಿಗಳು ಹರ್ತಿಮಠ ಅವರು ಸಭಾ ನಿರೂಪಣೆ ಮಾಡಿದರು. ಶಿವಲಿಂಗಯ್ಯಶಾಸ್ತ್ರಿಗಳು ಹಿರೇಮಠ ಸಿದ್ದಾಪುರ ಪ್ರಾಸ್ತಾವಿಕವಾಗಿ ಮಾತನಾಡಿದರು. ಸೃಷ್ಟಿ ಭರಮಗೌಡ್ರ ಅವರಿಂದ ಭರತನಾಟ್ಯ ಜರುಗಿತು.

ಐದು ದಿನಗಳವರೆಗೆ ನಡೆದ ಪ್ರವಚನ ಕಾರ್ಯಕ್ರಮದ ಮಂಗಲೋತ್ಸ ಜರುಗಿತು. ಪ್ರವಚನಕಾರರಾಗಿ ಶಿವಲಿಂಗಯ್ಯಶಾಸ್ತ್ರಿಗಳು ಹಿರೇಮಠ ಸಿದ್ದಾಪುರ ನೆರವೇರಿಸಿದರು. ಸಿದ್ದೇಶಕುಮಾರ ತಬಲಾ ಸಾಥ್ ನೀಡಿದರು.

# ಧರ್ಮವನ್ನು ಜಾತಿಗೆ ಅಂಟಿಸಬಾರದು



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಧರ್ಮ ಎಂಬುದನ್ನು ತೋರಿಸಲಾಗುವದಿಲ್ಲ. ಅದು ಒಂದು ಆಚರಣೆಯಾಗಿದ್ದು, ಆಚರಣೆಯ ಮೂಲಕವೇ ಅದನ್ನು ತಿಳಿಯಬಹುದು ಎಂದು ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು ಹೇಳಿದರು.

ಸಮೀಪದ ಅಬ್ಬಿಗೆರೆ ಗ್ರಾಮದ ಹಿರೇಮಠದಲ್ಲಿ ಲಿಂ. ಸೋಮಶೇಖರ ಶಿವಾಚಾರ್ಯರ 5ನೇ ಪುಣ್ಯ ಸ್ಮರಣೋತ್ಸವದ ನಿಮಿತ್ತ ಪ್ರವಚನ ನೀಡಿದ ಅವರು, ಮಠ-ಮಾನ್ಯಗಳಲ್ಲಿ ನಡೆಯುವ ಪ್ರವಚನ ಕೇಳುವದರಿಂದ ಮನಸ್ಸು ನಿರ್ಮಲವಾಗುತ್ತದೆ. ಧರ್ಮ ಎಂಬುದನ್ನು ಜಾತಿಗೆ ಅಂಟಿಸಬಾರದು. ಧರ್ಮದಿಂದ ನಡೆದರೆ ಜೀವನವೇ ಪಾವನವಾಗುತ್ತದೆ. ಎಲ್ಲರಲ್ಲೂ ದಯಾ ಭಾವದಿಂದ ನಡೆದುಕೊಂಡು ಜೀವನ ಪಾವನಗೊಳಿಸಿಕೊಳ್ಳಿ ಎಂದರು.

ಅಬ್ಬಿಗೇರಿ ಹಿರೇಮಠದ ಶ್ರೀ ವೀರಭದ್ರ ಶಿವಾಚಾರ್ಯರು ಆಶೀರ್ವಚನ ನೀಡಿ, ಮಾನವ ದೇವಮಾನವನಾಗಲು ಧರ್ಮದಿಂದ ನಡೆದಾಗ ಮಾತ್ರ ಸಾಧ್ಯ. ಮನಸ್ಸನ್ನು ಕಲಕಿದರೆ ತಾಳ್ಮೆಯನ್ನು ಕಳೆಯುತ್ತದೆ. ಪ್ರತಿಯೊಬ್ಬ ವ್ಯಕ್ತಿ ಭಕ್ತಿ, ಶ್ರದ್ಧೆಯ ಮಾರ್ಗದಲ್ಲಿ ನಡೆದರೆ ಬದುಕು ಸಾರ್ಥಕಗೊಂಡು ಜೀವನದಲ್ಲಿ ಸುಖ, ಶಾಂತಿ ಸಮೃದ್ಧಿ ನೆಲೆಸುತ್ತದೆ ಎಂದು ತಿಳಿಸಿದರು.

ಚಿತ್ರದುರ್ಗದ ಹಾಸ್ಯ ಸಾಹಿತಿ ಪಿ. ಜಗನ್ನಾಥ್ ಶ್ರೀಮಠದ ಪರಂಪರೆಯನ್ನು ತಿಳಿಸಿದರು. ನರೇಗಲ್ಲ ಪಟ್ಟಣದ ಅನ್ನಪೂರ್ಣೇಶ್ವರಿ ಮಹಿಳಾ ಸಂಘದವರು ವಿಭೂತಿ ಮಹಿಮೆ ಗೀತೆಯನ್ನು ಹಾಡಿದರೆ, ಬಸವರಾಜ ಹನುಮನಾಳ ಹಾಗೂ ಶಿವಾನಂದ ಕಮ್ಮಾರ ಸಂಗೀತ ಸೇವೆ ಸಲ್ಲಿಸಿದರು. ಡಾ. ಆರ್.ಕೆ. ಗಚ್ಚಿನಮಠ, ಅಬ್ಬಿಗೆರೆ ಗ್ರಾಮದ ಗಣ್ಯರು ಉಪಸ್ಥಿತರಿದ್ದರು. ಅಂದಪ್ಪ ವೀರಾಪೂರ ನಿರ್ವಹಿಸಿದರು.

### ಜಕ್ಕಲಿಯಲ್ಲಿ ನಾಲ್ವತವಾಡ ವೀರೇಶ್ವರ ಶರಣರ ಪುರಾಣ ಪ್ರವಚನ, ವಿವಾಹ ಸಂಭ್ರಮ

# ಮದುವೆ ಸಂಭ್ರಮದಲ್ಲಿ ಮಿಂದೆದ್ದ ಗ್ರಾಮ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಜಕ್ಕಲಿ ಗ್ರಾಮದ ಹಾಲಕೆರೆ ಶಾಖಾ ಶ್ರೀ ಅನ್ನದಾನೇಶ್ವರ ಜಾತ್ರಾ ಮಹೋತ್ಸವ ಅಂಗವಾಗಿ ತಿಂಗಳ ಪರ್ಯಂತ ನಡೆದಿರುವ ದ್ಯಾಂಪೂರ ಚನ್ನಕವಿ ವಿರಚಿತ ನಾಲ್ವತವಾಡ ಶ್ರೀ ವೀರೇಶ್ವರ ಶಿವಶರಣರ ಪುರಾಣ ಪ್ರವಚನದಲ್ಲಿ ಬರುವ ಮದುವೆ ಸನ್ನಿವೇಶ ಸೋಮವಾರ ಅದ್ದೂರಿಯಾಗಿ ಜರುಗಿತು.

ಮದುವೆ ನಿಮಿತ್ತ ರವಿವಾರ ಮತ್ತು ಸೋಮವಾರ ಊರಲ್ಲಿ ಸಡಗರ ಸಂಭ್ರಮ ಮನೆ ಮಾಡಿತ್ತು. ಊರಿನ ಅರ್ಧ-ಅರ್ಧ ಭಾಗದ ಭಕ್ತವೃಂದ ಗಂಡು ಮತ್ತು ಹೆಣ್ಣಿನ ಕಡೆಯವರಾಗಿ, ಬಂಧು-ಬಾಂಧವರಾಗಿ ಭಾಗವಹಿಸಿ ವಿಶಿಷ್ಟತೆ ಮೆರೆದರು. ಮದುವೆ ದಿಬ್ಬಣ, ಮಾಂಗಲ್ಯ ಧಾರಣೆ, ಅಕ್ಷತೆಯಿಂದ ಹಿಡಿದು ವಿವಾಹ ಸಮಾರಂಭದ ಎಲ್ಲ ಕಾರ್ಯಕ್ರಮಗಳು ಅತ್ಯಂತ ವಿಧಿವತ್ತಾಗಿ ಜರುಗಿದವು. ಈ ಸನ್ನಿವೇಶಕ್ಕೆ ಇಡೀ ಗ್ರಾಮವೇ ಸಾಕ್ಷಿಯಾಯಿತು.

ಊರಿನ ಶ್ರೀ ವೀರಭದ್ರೇಶ್ವರ ಭಾಗದ ಸದ್ಭಕ್ತರು ಗಂಡಿನ ಕಡೆಯವರಾಗಿ ರವಿವಾರ ಸಂಜೆ ಗ್ರಾಮದ ಶ್ರೀ ಕಲ್ಮೇಶ್ವರ ದೇವಸ್ಥಾನಕ್ಕೆ ಕನ್ಯಾ ನೋಡಲು ಆಗಮಿಸಿದ್ದರು. ಬಳಿಕ ಅವರನ್ನು ಹಳ್ಳಿಯ ಪದ್ಧತಿಯಂತೆ ಹೆಣ್ಣಿನ ಕಡೆಯವರು ಬರಮಾಡಿಕೊಂಡರು. ನಂತರ ಉತ್ತರ ಮತ್ತು ಪೂರ್ವಾಭಿಮುಖವಾಗಿ ವಿಶೇಷವಾಗಿ ಅಲಂಕರಿಸಲಾಗಿದ್ದ ಎರಡು ಗೊಂಬೆಗಳಿಗೆ ಹೆಸರುಗಳನ್ನಿಟ್ಟು ಕೂಡ್ರಿಸಿದರು. ಸಾಂಪ್ರದಾಯಿಕವಾಗಿ ನಾಲ್ವತವಾಡದ ವರ ಶ್ರೇಷ್ಠ ವೀರೇಶ್ವರ ಶರಣರಿಗೆ, ಸಿಂಗರಿಸಿದ್ದ ವಧು ಶರಣೆ ಗುರುದೇವಿ ತಾಯಿ ಕನ್ಯಾಮಣಿಯನ್ನು ತೋರಿಸಿದರು. ಆಗ ಅಲ್ಲಿ ಸೇರಿದ್ದ ವರನ ಕಡೆಯ ಗುರು-ಹಿರಿಯರು ವರೋಪಚಾರ ಮಾತನಾಡಿ ಕನ್ಯಾದಾನದ ಮಾತುಕತೆಗೆ ಆಹ್ವಾನ ನೀಡಿದರು.



ಸೋಮವಾರ ಸಂಜೆ ಊರಿನ ಅರ್ಧ ಭಾಗದ ಭಕ್ತರು ವಧುವಿನ ಕಡೆಯವರಾಗಿ ವಿವಿಧ ವೇಷಭೂಷಣಗಳನ್ನು ಧರಿಸಿ ಶ್ರೀ ವೀರಭದ್ರೇಶ್ವರ ದೇವಸ್ಥಾನಕ್ಕೆ ತೆರಳಿ ಭಕ್ತಿಭಾವದಿಂದ ಸಂಪ್ರದಾಯದಂತೆ ಕನ್ಯಾದಾನ ಮಾಡಿದರು. ವಿವಾಹಕ್ಕೆ ವಧುವಿಗೆ 5 ಸೀರೆ, 9 ಖಣ, ತಾಳಿ, ಮೂಗುತಿ, ಮಡಿ, ಉಂಗುರ ಮತ್ತು ಕಾಲುಂಗರವನ್ನು ವರನ ಕಡೆಯ ಭಕ್ತರು ಹಾಗೂ ವರನಿಗೆ ಒಂದು ಜತೆ ದೋತರ, ಪ್ಯಾಂಟ್, ಶರ್ಟು, ಬಾಂಡೆ ಸಾಮಾನಗಳನ್ನು ವಧುವಿನ ಕಡೆಯ ಭಕ್ತರು ಕಾಣಿಕೆಯ ರೂಪದಲ್ಲಿ ನೀಡಿದರು.

ರಾತ್ರಿ 8ಕ್ಕೆ ವಧುವಿನ ಕಡೆಯ ಬಂಧುವಾಗಿ ಹಿರಿಯರಾದ ಶೇಖಣ್ಣವರ ಮೇಟಿ ನೇತೃತ್ವದಲ್ಲಿ ಅಪಾರ ಸಂಖ್ಯೆಯ ಭಕ್ತರು ಶ್ರೀ ಬಸವೇಶ್ವರ ದೇವಸ್ಥಾನದಿಂದ ಗ್ರಾಮದ ಪ್ರಮುಖ ಬೀದಿಗಳಲ್ಲಿ ವಧು-ವರರನ್ನು ವಾದ್ಯ ವೈಭವದೊಂದಿಗೆ ಮೆರವಣಿಗೆ ಮೂಲಕ ಶ್ರೀ ಅನ್ನದಾನೇಶ್ವರ ಕಲ್ಯಾಣ ಮಂಟಪಕ್ಕೆ ಕರೆತರಲಾಯಿತು. ಮೆರವಣಿಯಲ್ಲಿ ಅಕ್ಷರಶಃ ಹೆಣ್ಣಿನ ವೇಷಭೂಷಣ ಧರಿಸಿದ್ದ ವಿನಾಯಕ ಅಥಣಿ, ವೀರೇಶ ನರೇಗಲ್ಲ ಕಣ್ಮನ ಸೆಳೆದರು.

ವಿಶೇಷ ಮಂಟಪದಲ್ಲಿ ಅಲಂಕರಿಸಲಾಗಿದ್ದ ವರ ವೀರೇಶ್ವರ ಶರಣ, ವಧು ಗುರುದೇವಿ ಮಾತೆ ಗೊಂಬೆಗಳಿಗೆ ದೇವರ ಸ್ವರೂಪ ಎಂದು ಭಾವಿಸಿ ಸಾಂಪ್ರದಾಯಿಕವಾಗಿ ಶರಣಯ್ಯ ಹಿರೇಮಠ ನೇತೃತ್ವದಲ್ಲಿ ವೇ.ಮೂ. ಗುರುಲಿಂಗಮೂರ್ತಿ ಮಂಟಯ್ಯನಮಠ ಇವರ ಪೌರೋಹಿತ್ಯದಲ್ಲಿ ಶಾಸ್ತ್ರೋಕ್ತವಾಗಿ ಮಂತ್ರ ಪಠಣದೊಂದಿಗೆ ಮದುವೆ ಕಾರ್ಯ ನೆರವೇರಿಸಲಾಯಿತು. ನೆರದಿದ್ದ ಅಪಾರ ಸಂಖ್ಯೆಯ ಭಕ್ತರು ಮದುಮಕ್ಕಳಿಗೆ ಅಕ್ಷತೆ ಹಾಕಿ ಶುಭ ಕೋರಿದರು.

ಹೆಣ್ಣಿನ ಕಡೆಯವರಾಗಿ ಮಲ್ಲಿಕಾರ್ಜುನ ಮೇಟಿ ದಂಪತಿಗಳು, ಗಂಡಿನ ಕಡೆಯವರಾಗಿ ಸುಭಾಸ ಕಡಗದ ದಂಪತಿಗಳು ವಿಳ್ಳೆ ಕಾರಣ, ಬಾಸಿಂಗ ಕಟ್ಟುವ, ಉಂಗುರು ಮುಡಿಸುವ, ಮಾಂಗಲ್ಯ ಧಾರಣೆ ಕಾರ್ಯಗಳನ್ನು ನೆರವೇರಿಸಿದರು.

ಈ ವಿವಾಹ ಸಮಾರಂಭದ ನಿಮಿತ್ತ ಸದ್ಭಕ್ತರು ಕೈಗೊಂಡ ಗಂಡು-ಹೆಣ್ಣಿನ ಗೊಂಬೆಗಳ ಮದುವೆ ಕಾರ್ಯ ಮೇಲ್ನೋಟಕ್ಕೆ ನಿಜವಾಗಿಯೂ ನಡೆಯುತ್ತಿದೆಯೇನೋ ಎಂಬಂತಿತ್ತು.

ವೇ.ಮೂ. ಎಂ.ಜಿ. ಗುರುಸಿದ್ದೇಶ್ವರ ಶಾಸ್ತ್ರೀಯವರು ಮಾತನಾಡಿ, ಯುವ ಪೀಳಿಗೆಗೆ ಒಳ್ಳೆಯ ಸಂದೇಶ ನಾಲ್ವತವಾಡ ವೀರೇಶ್ವರ ಶಿವಶರಣರು ಬದುಕಿನ ಪರಿ ಆದರ್ಶ. ಇದು ನಮ್ಮ ಹಿರಿಯರು ನಡೆಸಿಕೊಂಡು ಬಂದಿರುವ ಸಂಪ್ರದಾಯವಾಗಿದೆ. ಇಂದಿನ ಯಾಂತ್ರಿಕ ಹಾಗೂ ಟಿವಿ, ಮೊಬೈಲ್ ಹಾವಳಿಯಿಂದ ಪುರಾಣ ಪುಣ್ಯಕತೆಗಳು, ಕೀರ್ತನೆಗಳು ನಶಿಸಿ ಹೋಗುತ್ತಿರುವುದು ವಿಷಾದದ ಸಂಗತಿ. ಈ ಅನ್ನದಾನೇಶ್ವರ ಶ್ರೀಮಠದಲ್ಲಿ ಪ್ರತಿ ವರ್ಷ ಮಹಾತ್ಮರ ಪುರಾಣ ಪ್ರವಚನ ನಡೆಸುವದರಿಂದ ನಮ್ಮ ಮುಂದಿನ ಪೀಳಿಗೆಗೆ ಆಧ್ಯಾತ್ಮದ ಜ್ಞಾನ ತಿಳಿಸುವ ಉದ್ದೇಶ ಹೊಂದಲಾಗಿದೆ ಎಂದು ತಿಳಿಸಿದರು.



ಇದನ್ನು ನೋಡಲೆಂದು ಪರ ಊರುಗಳಿಂದ ಭಕ್ತರು ತಂಡೋಪತಂಡವಾಗಿ ಶ್ರೀಮಠಕ್ಕೆ ಆಗಮಿಸಿದ್ದರು.

# ಸಹಕಾರಿ ಸಂಘ ನಂ. 2ರ ವಾರ್ಷಿಕ ಸಭೆ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ವಿತರಣೆ, ಸರಕಾರದ ಪರ ಬೆಂಬಲ ಬೆಲೆಯಲ್ಲಿ ಕಡಲೆ ಖರೀದಿ ಸೇರಿದಂತೆ ಇತರೆ ಆರ್ಥಿಕ ವ್ಯವಹಾರಗಳಿಂದ ಸಂಘವು ಈ ವರ್ಷ 8.26 ಲಕ್ಷ ರೂ ಲಾಭ ಗಳಿಸಿದೆ ಎಂದು ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ನಂ. 2ರ ಅಧ್ಯಕ್ಷ ರುದ್ರಪ್ಪ ಮುಸ್ಕಿನಭಾವಿ ಹೇಳಿದರು.

ಇಲ್ಲಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ನಂ. 2ರ 107ನೇ ವಾರ್ಷಿಕ ಸರ್ವ ಸಾಧಾರಣ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಂಘದ ಸಿಬ್ಬಂದಿಯನ್ನು ಗೊಬ್ಬರದ ವ್ಯವಹಾರ ಮಾಡಲು ತರಬೇತಿಗೆ ಕಳಿಸಲಾಗಿದ್ದು, ಮುಂದಿನ ವರ್ಷ ರಾಸಾಯನಿಕ ಗೊಬ್ಬರ ಮಾರಾಟ ಕೇಂದ್ರ ತೆರೆಯಲಾಗವುದು. ಪಡಿತರ ನ್ಯಾಯ ಬೆಲೆ ಅಂಗಡಿಗೂ ಪರವಾನಿಗೆ ದೊರೆತಿದ್ದು, ಕೆಲವೇ ತಿಂಗಳಲ್ಲಿ ಮಾರುತಿ ನಗರದಲ್ಲಿ ಆರಂಭಿಸಲಾಗುವುದು ಎಂದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿ.ಬಿ. ಬೆಣಕಲ್ ವಾರ್ಷಿಕ ವರದಿಯನ್ನು ವಿವರಿಸಿ, ಆರ್ಥಿಕ ವರ್ಷದಲ್ಲಿ 2.68 ದುಡಿಯುವ ಬಂಡವಾಳವನ್ನು ಹೊಂದಿದ್ದು, ಪ್ರಸ್ತುತ ವರ್ಷದಲ್ಲಿ 8.79 ಕೋಟಿ ವ್ಯವಹಾರವನ್ನು ಹೊಂದಿದೆ. ಸಂಘವು ಠೇವಣಿಯಲ್ಲಿ ನಿರೀಕ್ಷಿತ ಪ್ರಗತಿ ಸಾಧಿಸಿದ್ದು, 92.26 ಲಕ್ಷ ಠೇವು ಜಮಾ ಇರುತ್ತದೆ ಎಂದು ವಿವರಿಸಿದರು. ಕೃಷಿ ಅಧಿಕಾರಿ ರಮೇಶ ಜಟ್ಟಿ ರೈತ ಸಂಪರ್ಕ ಕೇಂದ್ರದಿಂದ ದೊರೆಯುವ ಬೀಜ, ಗೊಬ್ಬರ, ಕೃಷಿ ಯಂತ್ರೋಪಕರಣಗಳು, ಹಾಗೂ ಕ್ರೀಮಿನಾಶಕಗಳ ಬಗ್ಗೆ ವಿವರಿಸಿದರು. ಹೊಸ ಸಾಲ ಕೊಡುವದನ್ನು ನಿಲ್ಲಿಸಿರುವುದು, ರೇಷನ್ ಅಂಗಡಿ ಆರಂಭಿಸುವುದು, ಗೊಬ್ಬರ ಮಾರಾಟ ಕೇಂದ್ರ, ಪ್ರತಿ ಸದಸ್ಯರಿಗೆ ಅಡಾವೆ ಪತ್ರಿಕೆ ವಿತರಿಸುವುದು ಸೇರಿದಂತೆ ವಿವಿಧ ವಿಷಯಗಳನ್ನು ಚರ್ಚಿಸಲಾಯಿತು.

74 ವರ್ಷ ಪೂರೈಸಿದ ಹಿರಿಯ ಸದಸ್ಯರಾದ ಗವಿಶಿದ್ದಪ್ಪ ರೇವಡಿ, ಮಾಳವ್ವ ಸೋಮನಕಟ್ಟಿ, ಸೋಮಣ್ಣ ಯಲಿಶಿರುಂಜ, ಕಲ್ಲಯ್ಯ ನಾಗವಿಮಠ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಇದಕ್ಕೂ ಪೂರ್ವ ನಿಧನ ಹೊಂದಿದ ಸದಸ್ಯರಿಗೆ ಮೌನಾಚರಿಸಿ ಗೌರವ ಸಲ್ಲಿಸಲಾಯಿತು. ಮಂಜುನಾಥ ಗದಗಿನ ನಿರೂಪಿಸಿದರು, ಮಲ್ಲನಗೌಡ ಪಾಟೀಲ ವಂದಿಸಿದರು.

### ಕೃತಪುರ ಅರ್ಬನ್ ಸೌಹಾರ್ದ ಪತ್ತಿನ ಸಹಕಾರಿ ಸಂಘದ ವಾರ್ಷಿಕ ಸಭೆ

# ಸಾಲಗಾರರಷ್ಟೇ ಜಾಮೀನುದಾರರೂ ಜವಾಬ್ದಾರರು

■ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರಿ ಸಂಘದಲ್ಲಿ ಸಾಲ ಪಡೆದ ಸಾಲಗಾರರಷ್ಟೇ ಜಾಮೀನುದಾರರೂ ಜವಾಬ್ದಾರರು. ಸದಸ್ಯರು ಸಹಕಾರಿಯ ಫೋಟ್ ನಿಯಮಗಳನ್ನು ಪಾಲಿಸಬೇಕು. ತಪ್ಪಿದಲ್ಲಿ ಸಹಕಾರಿ ಬೈಲಾ ಪ್ರಕಾರ ಸದಸ್ಯತ್ವದಿಂದ ಅನರ್ಹಗೊಳ್ಳುವದು ಎಂದು ಗದುಗಿನ ಕೃತಪುರ ಅರ್ಬನ್ ಸೌಹಾರ್ದ ಪತ್ತಿನ ಸಹಕಾರಿ ನಿಯಮಿತದ ಅಧ್ಯಕ್ಷ ಮಹೇಶ ಕೋಟಿ ಹೇಳಿದರು.



ಅವರು ನಗರದ ಕಲ್ಯಾಣ ಬಸವೇಶ್ವರ ದೇವಸ್ಥಾನ ಸಮುದಾಯ ಭವನದಲ್ಲಿ ಜರುಗಿದ ಕೃತಪುರ ಅರ್ಬನ್ ಸೌಹಾರ್ದ ಪತ್ತಿನ ಸಹಕಾರಿ ನಿಯಮಿತದ 2024-25ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಗದಗ ತಾಲೂಕ ವೀರಶೈವ ಮಹಾಸಭಾದ ನಿರ್ದೇಶಕರಾದ ಸಾವಿತ್ರಿ ಹೂಗಾರ ಗದಗ ತಾಲೂಕಾ ಪಂಚ ಗ್ಯಾರಂಟಿ ಪ್ರಾಧಿಕಾರದ ಸದಸ್ಯರಾಗಿ ನೇಮಕಗೊಂಡ ನಿಮಿತ್ತ ಸನ್ಮಾನಿಸಲಾಯಿತು. ವೇದಿಕೆಯ ಮೇಲೆ ನಿರ್ದೇಶಕರಾದ ಬಸವರಾಜ ರಾಮನಕೊಪ್ಪ, ಬಸವರಾಜ ಕೊರ್ಲಹಳ್ಳಿ, ಗಂಗಾಧರ ಮೇಲಗಿರಿ, ಶಂಭು ಕಾರಕಟ್ಟಿ, ಸುಶೀಲಾ ಕೋಟಿ, ಸುರೇಖಾ ಪಿಳ್ಳಿ, ಸಲಹಾ ಸಮಿತಿಯ ಸದಸ್ಯ, ನಗರಸಭಾ ಸದಸ್ಯ ರಾಘವೇಂದ್ರ ಯಳವತ್ತಿ, ಸಲಹಾ ಸಮಿತಿಯ ಸದಸ್ಯರಾದ ಶ್ರೀನಿವಾಸ ಬಣ್ಣದ, ಕಲ್ಯಾಣಪ್ಪ ಕೋಟಿ, ಶರಣಬಸವ ಮಠದ ಉಪಸ್ಥಿತರಿದ್ದರು.

ಸಾಲಗಾರರು ತಾವು ಪಡೆದ ಸಾಲವನ್ನು ಸರಿಯಾಗಿ ಮರುಪಾವತಿ ಮಾಡಬೇಕು. ಜಾಮೀನುದಾರರು ಈ ಬಗ್ಗೆ ನಿಗಾ ವಹಿಸಬೇಕು. ಹಿರಿಯರು ಪರಿಶ್ರಮದಿಂದ ಸ್ಥಾಪಿಸಿದ ಈ ಸಹಕಾರಿ ಸಂಸ್ಥೆಯನ್ನು ಪ್ರಗತಿಯೊಂದಿಗೆ ಮುನ್ನಡೆಸಲು ಸರ್ವ ನಿರ್ದೇಶಕರು, ಶೇರುದಾರರು ಸಹಕಾರ ನೀಡಬೇಕು ಎಂದು ಮಹೇಶ ಕೋಟಿ ತಿಳಿಸಿದರು.

ಸಹಕಾರಿ ಉಪಾಧ್ಯಕ್ಷರಾಗಿದ್ದ ಪ್ರೇಮನಾಥ ಬಣ್ಣದ ನಿಧನಕ್ಕೆ ಸಂತಾಪ ಸೂಚಿಸಲಾಯಿತು. ಸುಶೀಲಾ ಕೋಟಿ ಸ್ವಾಗತಿಸಿದರು. ಶಂಭು ಕಾರಕಟ್ಟಿ ನಿರೂಪಿಸಿದರು. ಸುರೇಖಾ ಪಿಳ್ಳಿ ವಂದಿಸಿದರು.

ನಗರಸಭಾ ಸದಸ್ಯರಾದ ಚಂದ್ರು ತಡಸದ, ಮುತ್ತು ಮುಶಿಗೇರಿ, ನಗರಸಭೆಯ ಮಾಜಿ ಸದಸ್ಯ ಶರಣಪ್ಪ ಗದ್ದಿಕೇರಿ, ಪ್ರಕಾಶ ಬೇಲಿ, ಶ್ರೀನಿವಾಸ ಹುಬ್ಬಳ್ಳಿ, ನಾಗರಾಜ ಉಮಚಗಿ, ಶಿವಪುತ್ರಪ್ಪ ಕುಂದಗೋಳ, ಶಿವಾನಂದ ಹುಬ್ಬಳ್ಳಿ, ಪಿ.ಸಿ. ಹಿರೇಮಠ, ಭಗನ್ ರಾಜಪುರೋಹಿತ, ಕುಮಾರ ಶೆಲ್ಲಿಕೇರಿ, ಎಸ್.ಎ. ಜಮಾದಾರ, ಈರಣ್ಣ ಮಾನೇದ, ಅಕ್ಷಯ ಬೆಂತೂರು, ಸಂಧ್ಯಾ ಕೋಟಿ, ದಾವಣಗೇರಿ ವಕೀಲರು, ಸಿದ್ಧಲಿಂಗೇಶ ಹಿರೇಮಠ, ಸತೀಶ ಪೂಜಾರಿ, ರಮೇಶ ಪಿಳ್ಳಿ, ಅಕ್ಷಯ ವಾಯಚಳ ಮುಂತಾದವರು ಪಾಲ್ಗೊಂಡಿದ್ದರು.

# ಸಂಸ್ಕಾರ, ಸಚ್ಚಾರಿತ್ರ್ಯದಿಂದ ಬದುಕು ಶ್ರೀಮಂತವಾಗಲಿ

▶▶ಮೊದಲನೇ ಪುಟದಿಂದ

ಬದುಕಿನ ವಿಕಾಸಕ್ಕೆ ಧರ್ಮವೇ ಅಡಿಪಾಯ. ಶಾಂತಿ, ನೆಮ್ಮದಿಯ ಬದುಕಿಗೆ ಧರ್ಮದ ಪರಿಪಾಲನೆ ಮುಖ್ಯ. ಧರ್ಮ, ಸಂಸ್ಕೃತಿ, ಸಭ್ಯತೆ, ಸದ್ಗುಣ ಮತ್ತು ಸಂಸ್ಕಾರ ಜನರ ನಿಜವಾದ ಆಸ್ತಿ. ಹೊರಗಿನ ಸಿರಿ ಸಂಪತ್ತು ಹೆಚ್ಚಾಗುತ್ತಿದ್ದರೂ ಆಂತರಿಕ ಬದುಕು ದುರ್ಬಲಗೊಳ್ಳುತ್ತಿರುವುದು ನೋವಿನ ಸಂಗತಿ. ಸಕಲರ ಬಾಳಿನಲ್ಲಿ ಬಲವನ್ನು ತುಂಬಿ ತರುವುದೇ ಗುರುವಿನ ಪರಮ ಗುರಿಯಾಗಿದೆ ಎಂದರು.

ಅಬ್ಬಿಗೇರಿ ಹಿರೇಮಠದ ಶ್ರೀ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಲಿಂ. ಶ್ರೀ ಸೋಮಶೇಖರ ಶಿವಾಚಾರ್ಯರು ಕೈಕೊಂಡ ಸತ್ಯಸಂಕಲ್ಪಗಳು ಶ್ರೀಮಠದ ಆವರಣದಲ್ಲಿ ಸಾಕಾರಗೊಳ್ಳುತ್ತಿರುವುದು ಭಕ್ತ ಸಂಕುಲಕ್ಕೆ ಸಂತೃಪ್ತಿ ತಂದಿವೆ ಎಂದರು. ಮುಕ್ತಿಮಂದಿರ ಕ್ಷೇತ್ರದ ವಿಮಲರೇಣುಕ ಮುಕ್ತಿಮುನಿ ಶಿವಾಚಾರ್ಯರು, ನರೇಗಲ್ಲ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು, ಸಂಗೊಳ್ಳಿ ಹಿರೇಮಠದ ಗುರುಲಿಂಗ ಶಿವಾಚಾರ್ಯರು, ಅಬ್ಬಿಗೇರಿ ಡಾ. ಬಸವರಾಜ ಶರಣರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಅಬ್ಬಿಗೇರಿ ಗ್ರಾ.ಪಂ ಅಧ್ಯಕ್ಷೆ ಲಲಿತಾ ಶರಣಪ್ಪ ರಾಠೋಡ, ಉಪಾಧ್ಯಕ್ಷೆ ಜ್ಯೋತಿ ತೆಗ್ಗಿನಕೇರಿ ಮತ್ತು ಸದಸ್ಯರು ಪಾಲ್ಗೊಂಡಿದ್ದರು.

ನಿವೃತ್ತ ಇಂಜಿನಿಯರ್ ಎಂ.ಎ. ಹಿರೇಮಠ, ಸುರೇಶ ಸಂಗಪ್ಪ ನಾಯ್ಕರ ಮುಂತಾದವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ಸುರೇಶ ಅವರೆಡ್ಡಿ ಸ್ವಾಗತಿಸಿದರು. ಅಂದಪ್ಪ ವೀರಾಪುರ ನಿರೂಪಿಸಿದರು. ಸಮಾರಂಭಕ್ಕೂ ಮುನ್ನ ಲಿಂ. ಸೋಮಶೇಖರ ಶಿವಾಚಾರ್ಯರ ಭಾವಚಿತ್ರದ ಮೆರವಣಿಗೆ ಉತ್ಸವ ಅಬ್ಬಿಗೇರಿ ಮೂಲಹಿರೇಮಠದಿಂದ ನರೇಗಲ್ಲ ರಸ್ತೆಯಲ್ಲಿರುವ ಹೊಸಮಠದವರೆಗೆ ಜರುಗಿತು.



ಗಾನಯೋಗಿ ಡಾ. ಪಂ. ಪುಟ್ಟರಾಜ ಸೇವಾ ಸಮಿತಿ ಗದಗ, ಶ್ರೀ ಗುರು ಪುಟ್ಟರಾಜ ಸಂಗೀತ ಶಿಕ್ಷಣ ಸಮಿತಿ ಯಳವತ್ತಿ ಹಾಗೂ ಯಳವತ್ತಿ ಗ್ರಾಮಸ್ಥರ ಸಹಯೋಗದಲ್ಲಿ ಪರಮಪೂಜ್ಯ ಪದ್ಮಭೂಷಣ ಡಾ. ಪಂ. ಪುಟ್ಟರಾಜ ಕವಿ ಶಿವಯೋಗಿಗಳವರ 15ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ಶಿವಯೋಗಿ ಡಾ. ಪಂ. ಪುಟ್ಟರಾಜ ಗುರುವರ್ಯರ ಭಾವಚಿತ್ರ ಮೆರವಣಿಗೆಗೆ ಯಳವತ್ತಿ ಗ್ರಾಮದ ಗುರು ಹಿರಿಯರು ಚಾಲನೆ ನೀಡಿದರು.

# ಧರ್ಮಸ್ಥಳದಲ್ಲಿ ಕೊಂದವರು ಯಾರು..?

▶▶ಮೊದಲನೇ ಪುಟದಿಂದ

"ಮಹಿಳಾ ಚಳವಳಿಯು ಸದಾಕಾಲ ನೊಂದವರ ಜೊತೆ ನಿಂತಿದೆ, ಆದ್ದರಿಂದಲೇ ಧರ್ಮಸ್ಥಳದ ನೊಂದ ಕುಟುಂಬಗಳನ್ನು ಭೇಟಿ ಮಾಡುವುದು ನಮಗೆ ಅತ್ಯಗತ್ಯವಾಗಿತ್ತು" ಎಂದರು.

ಮಹಿಳಾ ಮುನ್ನಡೆ ಸಂಘಟನೆಯ ಮಲ್ಲಿಗೆ ಮಾತನಾಡಿ, "ಧರ್ಮಸ್ಥಳದಲ್ಲಿ ನಡೆದಿರುವ ಹಲವಾರು ಹೆಣ್ಣುಮಕ್ಕಳ ಅಪಹರಣ, ಅತ್ಯಾಚಾರ, ಕೊಲೆಗಳ ವಿರುದ್ಧ ಹೋರಾಟ ಸುದೀರ್ಘ ಕಾಲದಿಂದ ನಡೆದುಬಂದಿದೆ. ನಿರಂತರವಾಗಿ, ಅಂತರ್ಗಾಮಿಯಾಗಿ ಸ್ಥಳೀಯರು ಈ ಹೋರಾಟವನ್ನು ಆರದಂತೆ ಮುನ್ನಡೆಸುತ್ತಿದ್ದಾರೆ. ಇವರೊಂದಿಗೆ ಕೊಂದವರು ಯಾರು? ವೇದಿಕೆಯೂ ಜೊತೆನಿಂತಿದ್ದು, ನೊಂದವರಿಗೆ ನ್ಯಾಯ ದೊರೆಯುವ ನಿಟ್ಟಿನಲ್ಲಿ ನಮ್ಮೆಲ್ಲರ ಪ್ರಯತ್ನ ಮುಂದುವರೆಯಲಿದೆ" ಎಂದು ಹೇಳಿದರು. ಜನವಾದಿ ಮಹಿಳಾ ಸಂಘಟನೆಯ ಕೆ.ಎಸ್ ವಿಮಲಾ ಮಾತನಾಡಿ, "ನಿನ್ನೆ ವಿಶ್ವ ಪ್ರಜಾಪ್ರಭುತ್ವದ ದಿನ; ವಿಪರ್ಯಾಸವೆಂದರೆ ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವದಲ್ಲಿ ಪ್ರಜಾಪ್ರಭುತ್ವದ ಅಣಕವಾಗುತ್ತಿದೆ. ಧರ್ಮಸ್ಥಳದಲ್ಲಿ ಹಲವಾರುಹೆಣ್ಣುಮಕ್ಕಳ ಕೊಲೆಯಾಗಿದ್ದರೂ, ಇನ್ನೂ ತಪ್ಪಿಸ್ಥರಿಗೆ ಶಿಕ್ಷೆಕೊಡಿಸುವಲ್ಲಿ ವಿಳಂಬವಾಗುತ್ತಿದೆ. ವೇದವಲ್ಲಿ ಪ್ರಕರಣದಲ್ಲಿ ಗಂಡನನ್ನೇ ಆರೋಪಿಯನ್ನಾಗಿ ಮಾಡಿದ್ದರು. ಪದ್ಮಲತರವರ ಪ್ರಕರಣದಲ್ಲಿಯೂ ದೇವಾನಂದ್ ರವರನ್ನು ಆರೋಪಿಗಳನ್ನಾಗಿ ಮಾಡುವ ಷಡ್ಯಂತ್ರ ನಡೆಯಿತು. ಸೌಜನ್ಯ ಪ್ರಕರಣದಲ್ಲೂ ಮಾವನನ್ನೇ ಆರೋಪಿಯನ್ನಾಗಿ ಬಿಂಬಿಸುವ ಪ್ರಯತ್ನ ನಡೆಯಿತು" ಎಂದರು.

"ನಾವು ನೊಂದವರ ಸಂಭಂಧಿಕರನ್ನು ಮಾತನಾಡಿಸಿದಾಗ ಧರ್ಮಸ್ಥಳದಲ್ಲಿ ನಡೆದಿರುವ ಹಲವು ಕೇಸ್‌ಗಳಲ್ಲಿ ಸೂಕ್ತ ತನಿಖೆ ಮಾಡಬೇಕಿದ್ದ ಪೋಲೀಸರೇ ಯಾವುದೋ ಖಾಸಗಿ ಸಂಸ್ಥೆಯ ವಾಹನದಲ್ಲಿ ಬಂದು ಜನರಿಗೆ ಬೆದರಿಕೆ ನೀಡಿದ ಪ್ರಸಂಗಳಿವೆ.

# ಬಿಜೆಪಿ ನಾಯಕ ಬಂಡಿ ಸಂಜಯ್ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಿದ ಕೆಟಿಆರ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಬಿಆರ್‌ಎಸ್ ಕಾರ್ಯಾಧ್ಯಕ್ಷ ಕೆಟಿ ರಾಮರಾವ್ (ಕೆಟಿಆರ್) ಅವರು ಕೇಂದ್ರ ಗೃಹ ವ್ಯವಹಾರಗಳ ರಾಜ್ಯ ಸಚಿವ (ಎಂಒಎಸ್) ಬಂಡಿ ಸಂಜಯ್ ಕುಮಾರ್, ಕೆಲವು ಮಾಧ್ಯಮಗಳು ಮತ್ತು ಸಾಮಾಜಿಕ ಮಾಧ್ಯಮ ವೇದಿಕೆಗಳ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಿದ್ದಾರೆ.

ಕೆಟಿಆರ್ 10 ಕೋಟಿ ರೂ. ಪರಿಹಾರ ಕೋರಿ ಹೈದರಾಬಾದ್ ಸಿಟಿ ಸಿವಿಲ್ ನ್ಯಾಯಾಲಯವನ್ನು ಸಂಪರ್ಕಿಸಿದ್ದಾರೆ.

ಬಂಡಿ ಸಂಜಯ್ ಅವರು ಬೇಷರತ್ತಾಗಿ ಸಾರ್ವಜನಿಕ ಕ್ಷಮೆಯಾಚಿಸಬೇಕು, ಸುದ್ದಿ ಮತ್ತು ಡಿಜಿಟಲ್ ವೇದಿಕೆಗಳೊಂದಿಗೆ ಅವರ ವಿರುದ್ಧ ಮಾನನಷ್ಟ ವಿಷಯವನ್ನು ಪ್ರಕಟಿಸುವುದರಿಂದ ಅಥವಾ ಪ್ರಸಾರ ಮಾಡುವುದರಿಂದ ನ್ಯಾಯಾಲಯ ಅವರನ್ನು ನಿರ್ಬಂಧಿಸಬೇಕು ಎಂದು ಅವರು ಒತ್ತಾಯಿಸಿದರು.

ಡಿಸೆಂಬರ್ 15 ರಂದು ವಿಚಾರಣೆಗೆ ನಿಗದಿಪಡಿಸಿದ ಸಿಟಿ ಸಿವಿಲ್ ನ್ಯಾಯಾಲಯವು ಅರ್ಜಿಯನ್ನು ಸ್ವೀಕರಿಸಿದೆ.

ಕೆಟಿಆರ್ ಅವರ ಕಾನೂನು ಸಲಹೆಗಾರರ ಪ್ರಕಾರ, ಆಗಸ್ಟ್ 8 ರಂದು ಬಂಡಿ ಸಂಜಯ್ ಅವರು ತೆಲಂಗಾಣ ವಿಶೇಷ ಗುಪ್ತಚರ ಶಾಖೆಯ (ಎಸ್‌ಐಬಿ) ದುರುಪಯೋಗ, ಅಕ್ರಮ ಫೋನ್ ಟ್ಯಾಪಿಂಗ್ ಮತ್ತು ಆರ್ಥಿಕ ಅಕ್ರಮಗಳಿಗೆ ಕೆಟಿಆರ್ ಅವರನ್ನು ಸಂಪರ್ಕಿಸಿದ್ದಾರೆ ಎಂದು ಆರೋಪಿಸಿ ಮಾಡಿದ ಹೇಳಿಕೆಗಳಿಂದ ಮಾನನಷ್ಟ ಮೊಕದ್ದಮೆ ಹೂಡಲಾಗಿದೆ.

# ನಿಧನ

### ಶಿವಪ್ಪ ಅರಮನಿ



**ನರೇಗಲ್ಲ:** ಸಮೀಪದ ನಿಡಗುಂದಿ ಗ್ರಾಮದ ನಿವಾಸಿ ಶಿವಪ್ಪ ಅಂದಪ್ಪ ಅರಮನಿ(52) ಮಂಗಳವಾರ ನಿಧನ ಹೊಂದಿದರು.

ಅವರಿಗೆ ಪತ್ನಿ, ಪುತ್ರ, ಇಬ್ಬರು ಪುತ್ರಿಯರು ಇದ್ದಾರೆ.

# ಕಾಲಿಗೆ ಬೀಳದ ವಿದ್ಯಾರ್ಥಿಗಳಿಗೆ ಕೋಲಿನಿಂದ ಥಳಿಸಿದ ಸರ್ಕಾರಿ ಶಾಲೆ ಶಿಕ್ಷಕಿ

■ವಿಜಯಸಾಕ್ಷಿ ಸುದ್ದಿ, ಒಡಿಶಾ

ಬೆಳಗಿನ ಪ್ರಾರ್ಥನೆಯ ನಂತರ ತನ್ನ ಪಾದಕ್ಕೆ ಬೀಳದ 31 ವಿದ್ಯಾರ್ಥಿಗಳನ್ನು ಸಹಾಯಕ ಶಿಕ್ಷಕಿಯೊಬ್ಬರು ಥಳಿಸಿರುವ ಘಟನೆ ಒಡಿಶಾದ ಮಯೂರ್ಭಂಜ್ ಜಿಲ್ಲೆಯ ಪ್ರಾಥಮಿಕ ಸರ್ಕಾರಿ ಶಾಲೆಯಲ್ಲಿ ನಡೆದಿದೆ. ಬಳಿಕ ಅವರನ್ನು ಶಿಕ್ಷಣ ಇಲಾಖೆ ಅಮಾನತುಗೊಳಿಸಿದೆ.

ಸೆಪ್ಟೆಂಬರ್ 11 ರಂದು ಖಂಡದೇವುಲಾ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಈ ಘಟನೆ ನಡೆದಿದ್ದು, ಆರೋಪಿ ಸುಕಾಂತಿ ಕರ್ ಸಹಾಯಕ ಶಿಕ್ಷಕಿಯಾಗಿ ಕೆಲಸ ಮಾಡುತ್ತಿದ್ದರು.

ವರದಿಯ ಪ್ರಕಾರ, 6, 7 ಮತ್ತು 8 ನೇ ತರಗತಿಯ ವಿದ್ಯಾರ್ಥಿಗಳು ಬೆಳಗಿನ ಪ್ರಾರ್ಥನೆ ಮುಗಿಸಿ ತರಗತಿಗಳಿಗೆ ಹಾಜರಾಗಲು ಹೊರಟಾಗ, ಶಿಕ್ಷಕಿ ಅವರ ಕೋಣೆಗಳಿಗೆ ಪ್ರವೇಶಿಸಿ ತನ್ನ ಪಾದಗಳನ್ನು ಮುಟ್ಟದಿದ್ದಕ್ಕಾಗಿ ಅವರನ್ನು ಥಳಿಸಿದ್ದಾರೆ.



ಸ್ಥಳೀಯ ಶಿಕ್ಷಣ ಇಲಾಖೆ ಅಧಿಕಾರಿಗಳು ನಡೆಸಿದ ವಿಚಾರಣೆಯ ನಂತರ ಬೆಟ್ನೋಯ್ ಬ್ಲಾಕ್‌ನ ಬ್ಲಾಕ್ ಶಿಕ್ಷಣ ಅಧಿಕಾರಿ (ಬಿಇಒ) ಬಿಪ್ಲಪ್ ಕರ್ ಪ್ರಕರಣದ ನ್ಯಾಯವ್ಯಾಪ್ತಿಯನ್ನು ವಹಿಸಿಕೊಂಡರು.

"ಗೌರವಾರ್ಥವಾಗಿ ವಿದ್ಯಾರ್ಥಿಗಳು ತನ್ನ ಪಾದಗಳನ್ನು ಮುಟ್ಟದ ಕಾರಣ ಕರ್ ಬಹುಶಃ ಮನನೊಂದಿದ್ದರು. ನಂತರ ಅವರು 6, 7 ಮತ್ತು 8 ನೇ ತರಗತಿಗಳಿಗೆ ಹೋದರು, ಯಾರು ಪಾದ ಸ್ಪರ್ಶಿಸಿಲ್ಲ ಎಂದು ಕೇಳಿದ್ದಾರೆ. ಎದ್ದು ನಿಂತ ವಿದ್ಯಾರ್ಥಿಗಳಿಗೆ ಸಾಲಾಗಿ ನಿಲ್ಲಲು ಆದೇಶಿಸಲಾಯಿತು" ಎಂದು ಅಧಿಕಾರಿಯನ್ನು ಉಲ್ಲೇಖಿಸಿ 'ದಿ ಹಿಂದೂ' ವರದಿ ಮಾಡಿದೆ.

ಶಿಕ್ಷಕರು ಬಿದಿರಿನ ಕೋಲಿನಿಂದ ವಿದ್ಯಾರ್ಥಿಗಳ ಮೇಲೆ ಕ್ರೂರವಾಗಿ ಹಲ್ಲೆ ನಡೆಸಿದ್ದು, ಅವರಲ್ಲಿ ಹಲವರು ಗಾಯಗೊಂಡಿದ್ದಾರೆ. ಘಟನೆಯ ಬಗ್ಗೆ ತಿಳಿದ ಕೂಡಲೇ ಪೋಷಕರು ಶಾಲೆಗೆ ಧಾವಿಸಿ ಕರ್ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

"ಹಲವು ಮಕ್ಕಳ ಕೈಗಳಲ್ಲಿ ಮೂಗೇಟು ಆಗಿರುವುದುನ್ನೇ ಖುದ್ದು ನಾನೇ ಕಂಡುಕೊಂಡೆ. ಒಂದು ಮಗುವಿಗೆ ಪ್ರಥಮ ಚಿಕಿತ್ಸೆ ನೀಡಬೇಕಾಯಿತು, ಒಬ್ಬ ಹುಡುಗಿ ಸ್ವಲ್ಪ ಸಮಯದವರೆಗೆ ಪ್ರಜ್ಞೆ ಕಳೆದುಕೊಂಡಳು" ಎಂದು ಬಿಇಒ ಹೇಳಿದರು. ಗಾಯಗೊಂಡ ವಿದ್ಯಾರ್ಥಿಗಳನ್ನು ಚಿಕಿತ್ಸೆಗಾಗಿ ಬೆಟ್ನೋಯ್ ಆಸ್ಪತ್ರೆಗೆ ಕರೆದೊಯ್ಯಲಾಯಿತು.

### ಬ್ಯಾಂಕ್ ಸಾಲ, ಕೈಸಾಲ, ಬಡ್ಡಿ ಸಾಲದಿಂದ ಕಂಗೆಟ್ಟ ಈರುಳ್ಳಿ ಬೆಳೆಗಾರರು

# ಈರುಳ್ಳಿ ಬೆಲೆ ಕುಸಿತ ಹೆಚ್ಚಿಸಿದ ಭೀತಿ

■ವಿಜಯಸಾಕ್ಷಿ ಸುದ್ದಿ, ಡಂಬಳ

ಸಾಮಾನ್ಯವಾಗಿ ಈರುಳ್ಳಿ ಹೆಚ್ಚುವಾಗ ಕಣ್ಣೀರು ಬರುತ್ತದೆ. ಆದರೆ ತಾಲೂಕಿನಲ್ಲಿ ಈರುಳ್ಳಿ ಬೆಳೆದ ರೈತರು ಬೆಲೆ ಕುಸಿತದಿಂದಾಗಿ, ಹಾಕಿದ ಹಣವೂ ಕೈಸೇರದ ಸ್ಥಿತಿಯಿಂದ ಕಣ್ಣೀರು ಹಾಕುವ ಪರಿಸ್ಥಿತಿ ಬಂದೊದಗಿದೆ.

ಗದಗ ಜಿಲ್ಲೆಯ ಮುಂಡರಗಿ, ರೋಣ, ಗಜೇಂದ್ರಗಡ, ನರಗುಂದ, ಶಿರಹಟ್ಟಿ ಪ್ರದೇಶದ ಸುಮಾರು ಸಾವಿರ ಹೆಕ್ಟೇರ್‌ಗೂ ಅಧಿಕ ಪ್ರದೇಶದಲ್ಲಿ ವಿವಿಧ ತಳಿಯ ಈರುಳ್ಳಿ ಬೆಳೆಯಲಾಗಿದೆ. ಡಂಬಳ ಹೋಬಳಿ ವ್ಯಾಪ್ತಿಯಲ್ಲಿ ಹಲವಾರು ರೈತರು ಲಕ್ಷಾಂತರ ರೂ ಬ್ಯಾಂಕ್ ಸಾಲ, ಕೈಸಾಲ, ಬಡ್ಡಿ ಸಾಲ ಮಾಡಿ ಬಿತ್ತನೆ ಬೀಜ, ಗೊಬ್ಬರ, ದುಬಾರಿ ಮೌಲ್ಯದ ಕೀಟನಾಶಕ, ಕೂಲಿ ಖರ್ಚು ಮಾಡಿ ಈರುಳ್ಳಿ



ಬೆಳೆದಿದ್ದಾರೆ. ಕೆಲ ದಿನಗಳ ಹಿಂದೆ ಸುರಿದ ಸತತ ಮಳೆಗೆ ಈರುಳ್ಳಿ ಭೂಮಿಯಲ್ಲಿಯೇ ಕೊಳೆಯುತ್ತಿದೆ. ಅಳಿದು ಉಳಿದ ಬೆಳೆಗಾದರೂ ಉತ್ತಮ ದರ ಸಿಕ್ಕೀತು ಎಂದು ಕಾದು ಕುಳಿತಿದ್ದಾರೆ.

ಆದರೆ, ಈರುಳ್ಳಿ ಬೆಲೆ ಕುಸಿತದಿಂದಾಗಿ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಇತರ ರಾಜ್ಯಗಳಿಂದ ಈರುಳ್ಳಿ ಆವಕ, ಮಧ್ಯವರ್ತಿಗಳ ಹಾವಳಿ ಮುಂತಾದ ಕಾರಣಗಳಿಂದ ಈರುಳ್ಳಿ ಬೆಳೆ ಕುಸಿದಿದೆ. ಮನನೊಂದ ರೈತರು ಬೆಳೆದ ಬೆಳೆಯನ್ನು ನಾಶಪಡಿಸುತ್ತಿದ್ದಾರೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬೆಲೆ ಕುಸಿತ ತಡೆಯಲು ಬೆಂಬಲ ಬೆಲೆ ನಿಗದಿಪಡಿಸಬೇಕು. ಈರುಳ್ಳಿ ಶೇಖರಿಸಿಡಲು ಸೂಕ್ತ ಶೈತ್ಯಾಗಾರ ನಿರ್ಮಿಸಬೇಕು, ಮಧ್ಯವರ್ತಿಗಳ ಹಾವಳಿಯನ್ನು ನಿಯಂತ್ರಿಸಿ ರೈತರು ಬೆಳೆದ ಬೆಳೆಗೆ ನ್ಯಾಯಯುತ ಬೆಲೆ ಸಿಗುವಂತೆ ನೋಡಿಕೊಳ್ಳಬೇಕು ಎಂದು ರೈತರು ಒತ್ತಾಯಿಸುತ್ತಿದ್ದಾರೆ.

ಮಹಾರಾಷ್ಟ್ರದಲ್ಲಿ ಹಳೆಯ ಈರುಳ್ಳಿ ದಾಸ್ತಾನು ಹೆಚ್ಚಾಗಿದ್ದು, ಮಾರುಕಟ್ಟೆಗೆ ಬರುತ್ತಿದೆ. ರಾಜ್ಯದ ವಿವಿಧ ಜಿಲ್ಲೆಗಳಿಂದ ಬರುವ ಈರುಳ್ಳಿ ಉತ್ತಮವಾಗಿದ್ದರೆ ಉತ್ತಮ ಬೆಲೆ ಸಿಗುತ್ತದೆ. ಅಲ್ಲದೆ, ವಿದೇಶಗಳಿಗೆ ಹೆಚ್ಚಿನ ರಫ್ತಿಗೆ ಅವಕಾಶ ಮಾಡಿಕೊಟ್ಟರೆ ರೈತರಿಗೆ ಉತ್ತಮ ಬೆಲೆ ಸಿಗುತ್ತದೆ.

**– ಸಿದ್ದಣ್ಣ ಬಳಗೇರ.**
ವರ್ತಕರು, ಬೆಂಗಳೂರು.

ಸಾಮಾನ್ಯ ಈರುಳ್ಳಿಯಲ್ಲಿ ಘಾಟಿನ ಪ್ರಮಾಣ ಶೇ.3–4ರಷ್ಟು ಮೈಕ್ರೋ ಮೊಲಿಸ್ ಘನ ಪದಾರ್ಥ ಇರುತ್ತದೆ. ಆದರೆ ಗದಗ ಗ್ರಾಮೀಣ ಪ್ರದೇಶದಲ್ಲಿ ಬೆಳೆದ ಗುಲಾಬಿ ಈರುಳ್ಳಿಯಲ್ಲಿ ಘಾಟಿನ ಪ್ರಮಾಣ ಶೇ.8ರಿಂದ ಶೇ.10 ಹಾಗೂ ಘನ ಪದಾರ್ಥ ಶೇ.20ರಷ್ಟು ಇರುತ್ತದೆ. ಅಧಿಕ ಖಾರದ (ಘಾಟು), ಹೆಚ್ಚು ನಾರಿನಾಂಶ ಹಾಗೂ ಗುಲಾಬಿ ಬಣ್ಣದ ಈ ಈರುಳ್ಳಿಯನ್ನು ವಿವಿಧ ದೇಶಗಳಿಗೆ ರಫ್ತು ಮಾಡಲಾಗುತ್ತದೆ.

ಈಗಾಗಲೇ ಬ್ಯಾಂಕ್ ಸಾಲ, ಕೈಸಾಲ ಮಾಡಿ ಈರುಳ್ಳಿ ಬೆಳೆಯನ್ನು ಬೆಳದಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕೂಡಲೇ ಬೆಂಬಲ ಬೆಲೆ ನಿಗದಿಪಡಿಸಬೇಕು. ಸತತವಾಗಿ ಆರ್ಥಿಕ ಕುಸಿತ ಕಾಣುತ್ತಾ ಬಂದಿರುವ ರೈತರ ಹಿತ ಕಾಪಾಡುವುದಕ್ಕಾಗಿ ರಾಷ್ಟ್ರೀಯ ಬ್ಯಾಂಕ್‌ಗಳಲ್ಲಿ ಮಾಡಿರುವ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕು.

**– ಶಿವಪ್ಪ ಕರಿಗಾರ.**
ಡಂಬಳ ಗ್ರಾಮದ ರೈತ.

2700 ಹೇಕ್ಟೆರ್ ಈರುಳ್ಳಿ ಬೆಳೆ ಇದ್ದು, ಬೆಳೆ ವಿಮೆ ಮಾಡಿರುವ ಮಳೆಯ ಹಾನಿಗೆ ಒಳಗಾದ ಬೆಳೆಗಳಿಗೆ ಮಧ್ಯಂತರ ಶೇ.15ರಿಂದ 20ರಷ್ಟು ಪರಿಹಾರವನ್ನು ಶೀಘ್ರವೇ ನೀಡಲಾಗುತ್ತದೆ. ಬೆಳೆ ವಿಮೆ ಮಾಡದೆ ಇರುವವರಿಗೆ ಸರ್ಕಾರದಿಂದ ಪರಿಹಾರವನ್ನು ನೇರವಾಗಿ ರೈತರ ಖಾತೆಗೆ ನೀಡಲಾಗುವುದು.

**– ಎಂ.ಎಂ. ತಾಂಬೋಟಿ.**
ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಮುಂಡರಗಿ.

### ಶ್ರೀ ದೇವಾಂಗ ಸಮಾಜದ ಸಹಕಾರಿ ಸಂಘದ 14ನೇ ವಾರ್ಷಿಕ ಸಭೆ

## ಸಹಕಾರಿ ಕ್ಷೇತ್ರದಲ್ಲಿ ಸಮಾಜದ ಪಾತ್ರ ದೊಡ್ಡದು



■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಇಲ್ಲಿನ ಶ್ರೀ ದೇವಾಂಗ ಸಮಾಜ ಹಾಗೂ ನೇಕಾರರ ವಿವಿಧೋದ್ದೇಶಗಳ ಸಹಕಾರ ಸಂಘದ 14ನೇ ವಾರ್ಷಿಕ ಸರ್ವ ಸಾಧಾರಣ ಸಭೆಯು ಸಂಘದ ಅಧ್ಯಕ್ಷ ಪ್ರಕಾಶ ಹತ್ತಿಕಾಳರ ಅಧ್ಯಕ್ಷತೆಯಲ್ಲಿ ಜರುಗಿತು.

ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಬರಟ್ಟಿ ಮಾತನಾಡಿ, ಸಹಕಾರಿ ಕ್ಷೇತ್ರದಲ್ಲಿ ಸಮಾಜ ಹಾಗೂ ಸಮಾಜ ಬಾಂಧವರು ಸಕ್ರಿಯವಾಗಿ ಪಾಲ್ಗೊಂಡಾಗ ಸಮಾಜ ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಬೆಳೆಯುತ್ತದೆ. ಈ ದಿಶೆಯಲ್ಲಿ ದೇವಾಂಗ ನೇಕಾರರ ವಿವಿಧೋದ್ದೇಶಗಳ ಸಂಘ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದರು.

ಸಂಘದ ಕಾರ್ಯದರ್ಶಿ ದಶರಥರಾಜ ಕೊಳ್ಳಿ ಸಂಘ ನಡೆದು ಬಂದ ಹಾದಿಯನ್ನು ಸಭೆಗೆ ವಿವರಿಸಿ, ಸಮಾಜ ಸಂಘಟನೆಗೆ, ಮಹಿಳಾ ಸಂಘಟನೆಗೆ, ಧಾರ್ಮಿಕ ಸಂಘಟನೆಗೆ ನಮ್ಮ ಸಂಘ ಸಹಕಾರ ನೀಡುತ್ತಾ ಬಂದಿದ್ದು, ಸಮಾಜದ ಹಿರಿಯರನ್ನು ಗುರುತಿಸಿ ಗೌರವಿಸುತ್ತಿದೆ. ಈ ದಿಶೆಯಲ್ಲಿ ಸಮಾಜದ ಹಿರಿಯರ ಸಹಕಾರ ಅಮೂಲ್ಯವಾದುದು ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಹೊಸಬನಶಂಕರಿ ದೇವಿ ದೇವಸ್ಥಾನ ಮಹಿಳಾ ಮಂಡಳದ ಅಧ್ಯಕ್ಷೆ ರಾಧಾ ಎಮ್.ಬೆಲ್ಲದ ಮಾತನಾಡಿ, ಸಂಘವು ವ್ಯವಹಾರದ ಜೊತೆಗೆ ಸಾಮಾಜಿಕ ಚಟುವಟಿಕೆಗಳಲ್ಲಿಯೂ ತೊಡಗಿದೆ. ಪ್ರತಿವರ್ಷ ವಾರ್ಷಿಕ ಸಾಮಾನ್ಯ ಸಭೆಯಲ್ಲಿ 60 ವಸಂತ ಪೂರೈಸಿದ ನೇಕಾರರಿಗೆ ಸನ್ಮಾನ ಮಾಡುತ್ತಿರುವುದು ಹೆಮ್ಮೆಯ ವಿಷಯ ಎಂದು ಹೇಳಿದರು.

ದೇವಾಂಗ ಮಹಿಳಾ ಮಂಡಳದ ಅಧ್ಯಕ್ಷೆ ವೀಣಾ ಪಿ.ನೀಲಗುಂದ ಮಾತನಾಡಿ, ಆಡಳಿತ ಮಂಡಳಿ ಹಾಗೂ ಸಲಹಾ ಮಂಡಳಿಯ ಮಾರ್ಗದರ್ಶನದ ಫಲವಾಗಿ 14 ವರ್ಷ ಪೂರ್ಣಗೊಳಿಸಿ 15ನೇ ವರ್ಷಕ್ಕೆ ಪಾದಾರ್ಪಣೆ ಮಾಡುತ್ತಿರುವುದು ಸಂತಸದ ವಿಷಯ ಎಂದು ಹೇಳಿದರು.

ಪ್ರಿಯಾಂಕ ವ್ಹಿ.ಕುದರಿಮೋತಿ ಮಾತನಾಡಿ, ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಅಭಿವೃದ್ಧಿಗೆ ಸಹಕಾರ ಕ್ಷೇತ್ರ ಅಪಾರ ಕೊಡುಗೆಯನ್ನು ನೀಡಿದೆ. ಈ ಕ್ಷೇತ್ರದ ಪರಿಣಾಮಕಾರಿ ಬೆಳವಣಿಗೆಗೆ ಯುವಕರು, ಮಹಿಳೆಯರು ಕೈಜೋಡಿಸಿ ಎಂದರು.

ದೇವಾಂಗ ರತ್ನ ಪ್ರಶಸ್ತಿ ಪುರಸ್ಕೃತ ಸುಭಾಸ ಹುಲಗೂರ ಮಾತನಾಡಿದರು. ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಪ್ರಕಾಶ ಹತ್ತಿಕಾಳ ಶೇರುದಾರರಿಗೆ ಲಾಭಾಂಶದಲ್ಲಿ ಶೇ. 6 ಡಿವ್ವಿಡೆಂಡ್ ಘೋಷಿಸಿದರು. ಅಮೃತಾ ಬಗಾಡೆ ಪ್ರಾರ್ಥಿಸಿದರು. ವಜ್ರೇಶ್ವರಿ ಪೆಂಟಾ ಸ್ವಾಗತಿಸಿದರು. ನಿರ್ಮಲಾ ಕೊಳ್ಳಿ ನಿರೂಪಿಸಿದರು. ವಸಂತ ಇಂಜಿನಿ ವಂದಿಸಿದರು.

## ಮಕ್ಕಳೊಂದಿಗೆ ಹಿರಿಯರೂ ಸಮಾಜದ ಆಸ್ತಿ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಚಿಕ್ಕ ಮಕ್ಕಳ ದೈಹಿಕ, ಮಾನಸಿಕ ಆರೋಗ್ಯಕ್ಕೆ ಪೌಷ್ಟಿಕಾಂಶಗಳುಳ್ಳ ಆಹಾರ ಅವಶ್ಯ. ಈ ನಿಟ್ಟಿನಲ್ಲಿ ತಾಯಂದಿರು ಮತ್ತು ಅಂಗನವಾಡಿ ಶಿಕ್ಷಕಿಯರ ಪಾತ್ರ ಮಹತ್ವದ್ದಾಗಿದೆ ಎಂದು ಹಿರಿಯ ದಿವಾಣಿ ನ್ಯಾಯಾಧೀಶರಾದ ಭರತಯೋಗೇಶ ಕರಗುದರಿ ಹೇಳಿದರು.

ಅವರು ಸೋಮವಾರ ಪಟ್ಟಣದ ಅಂಗನವಾಡಿಯಲ್ಲಿ ತಾಲೂಕಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಆರೋಗ್ಯ ಇಲಾಖೆಯ ಆಶ್ರಯದಲ್ಲಿ ರಾಷ್ಟ್ರೀಯ ಪೌಷ್ಟಿಕಾಂಶ ಮಾಸಾಚರಣೆಗೆ ಚಾಲನೆ ನೀಡಿ ಮಾತನಾಡಿದರು.

ಮಕ್ಕಳಿಂದ ಹಿರಿಯರವರೆಗೆ ಎಲ್ಲರಿಗೂ ಪೌಷ್ಟಿಕ ಆಹಾರ ಎಂಬುದು ಈ ಬಾರಿಯ ಪೋಷಣ್ ಅಭಿಯಾನದ ಘೋಷವಾಕ್ಯವಾಗಿದ್ದು, ಮಕ್ಕಳೊಂದಿಗೆ ಹಿರಿಯರು ಸಮಾಜದ ಆಸ್ತಿ. ಅವರಿಗೂ ಪೌಷ್ಟಿಕ ಆಹಾರ ದೊರೆಯಲಿ. ಮುಖ್ಯವಾಗಿ ದೇಸಿ ಆಹಾರ ಮತ್ತು ಪೌಷ್ಟಿಕ ಆಹಾರವನ್ನು ಎಲ್ಲರೂ ಸೇವಿಸುವಂತಾಗಲಿ ಎಂದರು.

ಕಿರಿಯ ದಿವಾಣಿ ನ್ಯಾಯಾಧೀಶರಾದ ಸತೀಶ ಎಂ ಮಾತನಾಡಿ, ನಮಗೆ ಪ್ರಾದೇಶಿಕವಾಗಿ ಸಿಗುವ ಸಾಂಪ್ರದಾಯಿಕ ಆಹಾರ ಸಂಪತ್ತನ್ನು ಉಳಿಸಿ, ಬೆಳೆಸಿ ಮತ್ತು ಬಳಸಿಕೊಳ್ಳುವುದು ನಮ್ಮ ಆದ್ಯತೆಯಾಗಬೇಕು ಎಂದರು.

ಶಿಶು ಅಭಿವೃದ್ಧಿ ಅಧಿಕಾರಿ ಮೃತ್ಯುಂಜಯ ಗುಡ್ಡದಾನ್ವೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವಕೀಲರಾದ ಬಿ.ಎಸ್. ಬಾಳೇಶ್ವರಮಠ, ವಿ.ಎಸ್. ಪಶುಪತಿಹಾಳ, ಪಿ.ಎಂ. ವಾಲಿ ಮಹಿಳೆಯರಿಗೆ ಕಾನೂನಿನ ಕುರಿತು ಅರಿವು ಮೂಡಿಸಿದರು.

ಶಿರಹಟ್ಟಿ, ಲಕ್ಷೇಶ್ವರ ಭಾಗದ ಅಂಗನವಾಡಿ ಮೇಲ್ವಿಚಾರಕರು, ಕಾಂರ್ಯಕರ್ತೆಯರು, ಸಹಾಯಕಿಯರು ಮತ್ತು ಲಕ್ಷೇಶ್ವರ ಭಾಗದ ಅಂಗನವಾಡಿ ಮಕ್ಕಳ ಪೋಷಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## 'ಶಿವಯೋಗಿ ಶ್ರೀ' ಪುಟ್ಟರಾಜ ಪ್ರಶಸ್ತಿ ಪ್ರದಾನ



■ವಿಜಯಸಾಕ್ಷಿ ಸುದ್ದಿ, ಗದಗ

ಗಾನಯೋಗಿ ಡಾ. ಪಂ. ಪುಟ್ಟರಾಜ ಸೇವಾ ಸಮಿತಿ ಗದಗ, ಶ್ರೀ ಗುರು ಪುಟ್ಟರಾಜ ಸಂಗೀತ ಶಿಕ್ಷಣ ಸಮಿತಿ ಯಳವತ್ತಿ ಹಾಗೂ ಯಳವತ್ತಿ ಗ್ರಾಮಸ್ಥರ ಸಹಯೋಗದಲ್ಲಿ ಪರಮಪೂಜ್ಯ ಪದ್ಮಭೂಷಣ ಡಾ. ಪಂ. ಪುಟ್ಟರಾಜ ಕವಿ ಶಿವಯೋಗಿಗಳವರ 15ನೇ ಪುಣ್ಯಸ್ಮರಣೋತ್ಸವದ ಕಾರ್ಯಕ್ರಮದಲ್ಲಿ ಸಂಗೀತ ಕ್ಷೇತ್ರದಲ್ಲಿ ಸಾಧನೆ ಮಾಡಿದ ಗದುಗಿನ ಪಂ. ವೀರೇಶ ಕಿತ್ತೂರ, ಕೊಪ್ಪಳದ ಪಂ. ಸದಾಶಿವ ಪಾಟೀಲ ಹಾಗೂ ಬೆಂಗಳೂರಿನ ಪಂ. ನಾಗಲಿಂಗಯ್ಯ ಗವಾಯಿಗಳವರಿಗೆ 'ಶಿವಯೋಗಿ ಶ್ರೀ' ಪುಟ್ಟರಾಜ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕಾರ್ಯಕ್ರಮದಲ್ಲಿ ನೀಲಗುಂದ ಗುದ್ನೇಶ್ವರ ಶ್ರೀಮಠದ ಪೂಜ್ಯಶ್ರೀ ಪ್ರಭುಲಿಂಗ ಮಹಾಸ್ವಾಮಿಗಳು, ಹರ್ಲಾಪುರ ಕೊಟ್ಟೂರೇಶ್ವರ ಶ್ರೀಮಠದ ಪೂಜ್ಯಶ್ರೀ ಕೊಟ್ಟೂರೇಶ್ವರ ಶ್ರೀಗಳು, ಗದುಗಿನ ಶ್ರೀ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಪೂಜ್ಯಶ್ರೀ ಕಲ್ಲಯ್ಯಜ್ಜನವರು, ಧಾರವಾಡ–ಹುಬ್ಬಳ್ಳಿ ಮಹಾನಗರ ಪಾಲಿಕೆಯ ಮಹಾಪೌರರಾದ ಜ್ಯೋತಿ ಪಾಟೀಲ, ಸಿದ್ದಲಿಂಗಯ್ಯಸ್ವಾಮಿ ಹಿರೇಮಠ, ಗ್ರಾ.ಪಂ ಅಧ್ಯಕ್ಷರಾದ ರೇಷ್ಮಾಬಾನು ಹಳೆಮನೆ, ಬಿ. ಶ್ರೀರಾಮುಲು ಅವರ ಆಪ್ತ ಸಹಾಯಕ ಎಸ್.ಎಚ್. ಶಿವನಗೌಡ್ರ, ಮುದುಕಯ್ಯಸ್ವಾಮಿ ಹಿರೇಮಠ, ಸಮಾಜಸೇವಕ ಉಮೇಶ ಹಡಪದ ಮುಂತಾದವರು ಉಪಸ್ಥಿತರಿದ್ದರು.

## ಬೆಳೆ ಹಾನಿ ಪರಿಹಾರ ನೀಡಲು ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಸುರಿದ ಭಾರೀ ಮಳೆಯಿಂದ ಕಟಾವಿಗೆ ಬಂದ ಹೆಸರು ಬೆಳೆ ಸೇರಿದಂತೆ ಈರುಳ್ಳಿ, ಗೋವಿನಜೋಳ, ಮೆಣಸಿನಕಾಯಿ, ಶೆಂಗಾ, ಸೂರ್ಯಕಾಂತಿ ಬೆಳೆಗಳಿಗೆ ಹಾನಿ ಉಂಟಾಗಿದೆ. ಇದರಿಂದ ರೈತರು ಮತ್ತಷ್ಟು ಸಂಕಷ್ಟಕ್ಕೆ ಸಿಲುಕಿದ್ದಾರೆ. ಸರ್ಕಾರ ಕೂಡಲೇ ಬೆಳೆ ನಷ್ಟ ಪರಿಹಾರ ಹಾಗೂ ಬೆಳೆ ವಿಮೆ ಹಣ ನೀಡಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘದ ವಿ.ಆರ್. ನಾರಾಯಣರೆಡ್ಡಿ ಬಣದ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ಆಗ್ರಹಿಸಿದ್ದಾರೆ.



ಹಿಂಗಾರು ಹಂಗಾಮು ಬಿತ್ತನೆ ಮಾಡಲು ರೈತರಿಗೆ ಬೀಜ, ಗೊಬ್ಬರ ಕೊಳ್ಳಲು ಹಣದ ಅಗತ್ಯವಿರುವುದರಿಂದ ಶೀಘ್ರದಲ್ಲಿಯೇ ಪರಿಹಾರದ ಹಣವನ್ನು ರೈತರ ಬ್ಯಾಂಕ್ ಖಾತೆಗೆ ಜಮಾ ಮಾಡಬೇಕು. ಈಗಾಗಲೇ ಹಿಂಗಾರು ಹಂಗಾಮು ಬಿತ್ತನೆ ಮಾಡಲು ರೈತರು ಭೂಮಿಯನ್ನು ಹದಗೊಳಿಸುತ್ತಿದ್ದು, ಬಿತ್ತನೆ ಮಾಡಲು ಕಡಲೆ, ಜೋಳ, ಕುಸುಬೆ ಬೀಜ ಹಾಗೂ ಗೊಬ್ಬರ ಸಮರ್ಪಕವಾಗಿ ದೊರೆಯುವಂತೆ ಕೃಷಿ ಇಲಾಖೆ ನೋಡಿಕೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

## ಡೆಹ್ರಾಡೂನ್‌ನಲ್ಲಿ ಮೇಘಸ್ಫೋಟ: ಕನಿಷ್ಠ 10 ಮಂದಿ ಸಾವು ಹಲವರು ನಾಪತ್ತೆ!

■ವಿಜಯಸಾಕ್ಷಿ ಸುದ್ದಿ, ಉತ್ತರಾಖಂಡ

ಉತ್ತರಾಖಂಡದ ಡೆಹ್ರಾಡೂನ್‌ನಲ್ಲಿ ಮಂಗಳವಾರ (ಸೆ.16) ಮುಂಜಾನೆ ಸಂಭವಿಸಿದ, ಧಾರಾಕಾರ ಮಳೆ ಮತ್ತು ವ್ಯಾಪಕ ನಾಶನಷ್ಟಕ್ಕೆ ಕಾರಣವಾದ ಮೇಘಸ್ಫೋಟದಲ್ಲಿ ಕನಿಷ್ಠ ಹತ್ತು ಜನರು ಸಾವನ್ನಪ್ಪಿದ್ದಾರೆ ಮತ್ತು ಸುಮಾರು 8 ಜನರು ಕಾಣೆಯಾಗಿದ್ದಾರೆ ಎಂದು ವರದಿಯಾಗಿದೆ.

ಸಹಸ್ರಧಾರ ಕೇಂದ್ರಿತ ಮೇಘಸ್ಫೋಟದಿಂದ ಹಠಾತ್ ಪ್ರವಾಹ ಉಂಟಾಗಿ ಹೋಟೆಲ್, ಅಂಗಡಿ ಮತ್ತು ಮನೆಗಳು ಕೊಚ್ಚಿ ಹೋಗಿವೆ. ಜಿಲ್ಲೆಯಾದ್ಯಂತ ವಾಣಿಜ್ಯ ಸಂಸ್ಥೆಗಳು ಮತ್ತು ಪ್ರಮುಖ ಮೂಲಸೌಕರ್ಯಗಳಿಗೆ ತೀವ್ರ ಹಾನಿಯಾಗಿದೆ. ಅನೇಕ ಜನರು ಪ್ರವಾಹದಲ್ಲಿ ಕೊಚ್ಚಿ ಹೋಗಿರಬಹುದು ಎಂದು ಶಂಕಿಸಲಾಗಿದೆ.

ಡೆಹ್ರಾಡೂನ್‌ನ ಮಾಲ್ ದೇವ್ತಾ ಮತ್ತು ಮಸ್ಸೂರಿಯಲ್ಲಿ ಹೆಚ್ಚಿನ ಹಾನಿ ಸಂಭವಿಸಿದೆ ಎಂದು ಸರ್ಕಾರದ ವಿಪತ್ತು ನಿರ್ವಹಣಾ ವಿಭಾಗದ ಕಾರ್ಯದರ್ಶಿ ವಿನೋದ್ ಕುಮಾರ್ ಸುಮನ್ ತಿಳಿಸಿದ್ದಾರೆ.

ಹಾನಿಗೊಳಗಾದ ಪ್ರದೇಶಗಳಲ್ಲಿ ವಿವಿಧ ತಂಡಗಳು ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿವೆ. ಸುಮಾರು 300ರಿಂದ 400 ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ ಎಂದು ಸುಮನ್ ಹೇಳಿದ್ದಾರೆ. ತಪಕೇಶ್ವರದ ಭಗತ್ ಸಿಂಗ್ ಕಾಲೋನಿಯ ಶಿಖರ್ ಜಲಪಾತದ ಬಳಿ ನಾಲ್ವರು ಕೊಚ್ಚಿ ಹೋಗಿದ್ದಾರೆ. ಮಸ್ಸೂರಿಯ ಝರಿಪಾನಿ ಟೋಲ್ ಪ್ಲಾಝಾದಲ್ಲಿ ಸಂಭವಿಸಿದ ಭೂಕುಸಿತದಲ್ಲಿ ಇಬ್ಬರು ಕಾರ್ಮಿಕರು ಸಮಾಧಿಯಾಗಿದ್ದರು. ಈ ಪೈಕಿ ಒಬ್ಬರು ಸಾವನ್ನಪ್ಪಿದ್ದಾರೆ, ಇನ್ನೊಬ್ಬರು ಗಾಯಗೊಂಡಿದ್ದಾರೆ. ಕಾರ್ಲಿ ಗಾಡ್ ಪ್ರದೇಶದಲ್ಲಿ ಇಬ್ಬರು ಕಾಣೆಯಾಗಿದ್ದಾರೆ ಎಂದು ವರದಿಯಾಗಿದೆ.

ದೋಯಿವಾಲಾದಲ್ಲಿ ಹಲವಾರು ಮನೆಗಳು ಜಲಾವೃತಗೊಂಡಿದ್ದು, ರಾಜ್ಯ ವಿಪತ್ತು ನಿರ್ವಹಣಾ ಪಡೆ (ಎಸ್‌ಡಿಆರ್‌ಎಫ್) ತಂಡಗಳು ಚಂದ್ರಭಾಗ ನದಿಯಲ್ಲಿ ಸಿಲುಕಿದ್ದ ಮೂವರನ್ನು ರಕ್ಷಿಸಿವೆ.

## ಬಸ್ ತಡೆದು ವಿದ್ಯಾರ್ಥಿಗಳ ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮರ್ಪಕ ಬಸ್ ಸೌಲಭ್ಯಕ್ಕಾಗಿ ಆಗ್ರಹಿಸಿ ಪಟ್ಟಣದ ಬಸ್ ನಿಲ್ದಾಣದಲ್ಲಿ ಮಂಗಳವಾರ ಎಬಿವಿಪಿ ಕಾರ್ಯಕರ್ತರೊಡಗೂಡಿ ವಿದ್ಯಾರ್ಥಿಗಳು ಬಸ್ ತಡೆದು ದಿಢೀರ್ ಪ್ರತಿಭಟನೆ ನಡೆಸಿದರು.

ಲಕ್ಷ್ಮೇಶ್ವರದಿಂದ ಗದಗ ಸೇರಿ ಇತರೆಡೆ ಶಾಲಾ–ಕಾಲೇಜಗಳಿಗೆ ತೆರಳಲು ದಿನನಿತ್ಯವೂ ಬಸ್ಸಿಗಾಗಿ ಗಂಟೆಗಟ್ಟಲೇ ಕಾಯುವ ಶಿಕ್ಷೆ ತಪ್ಪದಂತಾಗಿದೆ. ಸರಿಯಾದ ಸಮಯಕ್ಕೆ ಬಸ್ಸುಗಳು ಬಾರದ್ದರಿಂದ ವಿದ್ಯಾರ್ಥಿಗಳು ತರಗತಿಯಿಂದ ಹೊರಗುಳಿಯಬೇಕಾಗುತ್ತಿದೆ. ಶಕ್ತಿ ಯೋಜನೆ ಪ್ರಾರಂಭವಾದಾಗಿನಿಂದ ಸಮಸ್ಯೆ ಮತ್ತಷ್ಟು ಹೆಚ್ಚಾಗಿದೆ. ಈ ಬಗ್ಗೆ ಹೋರಾಟ, ಪ್ರತಿಭಟನೆ



ಮಾಡಿದ್ದಾಗಿದೆ. ಸಂಬಂಧಪಟ್ಟ ಎಲ್ಲರಿಗೂ ಮನವಿ ಸಲ್ಲಿಸಿದ್ದೂ ಆಗಿದೆ. ಆದರೂ ಯಾವುದೇ ಪ್ರಯೋಜನವಾಗಿಲ್ಲ. ಶಾಲಾ–ಕಾಲೇಜು ಅವಧಿಯಲ್ಲಿ ಸಕಾಲಕ್ಕೆ ಬಸ್ ಬಿಡದಿದ್ದರೆ ವಿದ್ಯಾರ್ಥಿಗಳು ಏನು ಮಾಡಬೇಕು ಎಂದು ಸಾರಿಗೆ ಸಂಸ್ಥೆಯ ಅಧಿಕಾರಿಗಳ ವಿರುದ್ಧ ವಿದ್ಯಾರ್ಥಿಗಳು ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ಸ್ಥಳಕ್ಕಾಗಮಿಸಿದ ಪೊಲೀಸರು ವಿದ್ಯಾರ್ಥಿಗಳನ್ನು ಸಮಾಧಾನಪಡಿಸಿ ನಿಯಂತ್ರಣಾಧಿಕಾರಿಗಳೊಂದಿಗೆ ಚರ್ಚಿಸಿ ಬಸ್ಸಿನ ವ್ಯವಸ್ಥೆ ಮಾಡಿದರು. ಇದೇ ಸಂದರ್ಭದಲ್ಲಿ ಬೇರೆ ಡಿಪೋ ಸಾರಿಗೆ ಸಿಬ್ಬಂದಿಯೋರ್ವ ವಿದ್ಯಾರ್ಥಿಯ ಬಸ್‌ಪಾಸ್ ಕಸಿದುಕೊಂಡು ವಿದ್ಯಾರ್ಥಿಗಳ ಮೇಲೆ ಆಕ್ರೋಶ ವ್ಯಕ್ತಪಡಿಸಿದಾಗ ಇದನ್ನು ಖಂಡಿಸಿದ ವಿದ್ಯಾರ್ಥಿಗಳು ಹದ್ದುಮೀರಿ ವರ್ತಿಸಿದ ಸಾರಿಗೆ ಸಿಬ್ಬಂದಿ ಕ್ಷಮೆ ಕೇಳಬೇಕು ಎಂದು ಪಟ್ಟು ಹಿಡಿದರು.

ಈ ವೇಳೆ ಎಬಿವಿಪಿ ತಾಲೂಕಾ ಸಂಚಾಲಕ ಪ್ರಕಾಶ ಕುಂಬಾರ, ನಗರ ಕಾರ್ಯದರ್ಶಿ ಅಭಿಷೇಕ ಉಮಚಗಿ, ವಿನಾಯಕ ಕುಂಬಾರ ವಿನಾಯಕ ಸಪ್ಪಡ್ಲದ, ಅಭಿಷೇಕ ಈಶನಗೌಡ್ರ, ವೀರೇಶ ಕುಂಬಾರ, ಕಾರ್ತಿಕ ಹುನಗುಂದ, ಅರವಿಂದ ಇಚ್ಚಂಗಿ, ಹಾಲಪ್ಪ ಜೋಗಿ, ಶರಣಪ್ಪ ಪಾಟೀಲ್, ಸತೀಶ ತಳವಾರ, ಆನಂದ ಬಡಿಗೇರ, ಈರಣ್ಣ ಬಡಿಗೇರ ಹಾಲೇಶ ಪಾಟೀಲ, ಸಂಜನಾ ಪಾಟೀಲ, ಅನು ಅಣ್ಣಿಗೇರಿ, ಸವಿತಾ ಕರೆಯುತ್ತಿನ, ರಕ್ಷಿತಾ, ತೇಜು ಕುಂಬಾರ, ಸಂಗೀತಾ ನಂದಿಹಳ್ಳಿ, ವಿಜಯಲಕ್ಷ್ಮೀ ಕರೆಯುತ್ತಿನ, ಕೀರ್ತಿ ಮ್ಯಾಗೇರಿ, ತೇಜು ಕ್ಷತ್ರಿ ಮುಂತಾದವರಿದ್ದರು.

## ಗಣತಿ ಕಾರ್ಯದಲ್ಲಿ ತೊಡಕುಗಳಾದರೆ ತಿಳಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯ ಸರ್ಕಾರ ನಡೆಸಲು ಉದ್ದೇಶಿಸಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಗಣತಿ ಕಾರ್ಯವನ್ನು ಯಶಸ್ವಿಯಾಗಿ ನಡೆಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಜಿಲ್ಲಾ ಅಲ್ಪಸಂಖ್ಯಾತರ ಇಲಾಖೆಯ ಅಧಿಕಾರಿ ಅಮಿತ ಬಿದರಿ ಹೇಳಿದರು.

ಮಂಗಳವಾರ ಪಟ್ಟಣದ ಉಮಾ ವಿದ್ಯಾಲಯದಲ್ಲಿ ನಡೆದ ಸಾಮಾಜಿಕ ಮತ್ತು ಶೈಕ್ಷಣಿಕ ಗಣತಿ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರ ರಾಜ್ಯದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಗಣತಿ ಮಾಡುವ ಮೂಲಕ ಜನರ ಜೀವನ ಮಟ್ಟ ಸುಧಾರಿಸಲು ಬೇಕಾಗುವ ಯೋಜನೆ ರೂಪಿಸಲು



ಅನುಕೂಲವಾಗುತ್ತದೆ ಎನ್ನುವ ಉದ್ದೇಶ ಹೊಂದಿದೆ. ಸಾಮಾಜಿಕವಾಗಿ ಹಿಂದುಳಿದ ವರ್ಗಗಳ ಮತ್ತು ಶೈಕ್ಷಣಿಕವಾಗಿ ಹಿಂದುಳಿದ ಮಕ್ಕಳು ಅಭಿವೃದ್ಧಿಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಮಾಹಿತಿ ನೀಡಿದಲ್ಲಿ ಅನುಕೂಲವಾಗುತ್ತದೆ. ಅದಕ್ಕಾಗಿ ಶಿಕ್ಷಕರು ತಾಲೂಕಿನಲ್ಲಿ ಪ್ರತಿ ಮನೆಗೂ ಭೇಟಿ ನೀಡಿ ಆ ಕುಟುಂಬದ ಸಂಪೂರ್ಣ ಮಾಹಿತಿ ಸಂಗ್ರಹಿಸಿ ಸರ್ಕಾರಕ್ಕೆ ಮಾಹಿತಿ ನೀಡಬೇಕು. ಗಣತಿ ಕಾರ್ಯದಲ್ಲಿ ಆಗುವ ತೊಂದರೆಗಳ ಕುರಿತು ನೀವು ಮುಕ್ತವಾಗಿ ತಿಳಿಸಿ ಸಮಸ್ಯೆಗೆ ಪರಿಹಾರ ನೀಡುವ ಕಾರ್ಯವನ್ನು ಅಧಿಕಾರಿಗಳು ಮಾಡುತ್ತಾರೆ ಎಂದು ಹೇಳಿದರು. ಈ ವೇಳೆ ತಹಸೀಲ್ದಾರ ಧನಂಜಯ ಎಂ, ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಬಿಆರ್‌ಪಿ ಈಶ್ವರ ಮೆಡ್ಲೇರಿ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಮರಿಗೌಡರ, ಗುಂಜಳ ಸೇರಿ ಸುಮಾರು 250 ಶಿಕ್ಷಕರು ಮತ್ತು ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka